# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 295 ₹4, FRIDAY, 19 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26




## ಫೆ.12ರಿಂದ ವಿಧಾನಮಂಡಲ ಅಧಿವೇಶನ

### ಫೆಬ್ರವರಿ 16ಕ್ಕೆ ರಾಜ್ಯ ಬಜೆಟ್ ಮಂಡನೆ

ಬೆಂಗಳೂರು: ಫೆಬ್ರವರಿ 12ರಿಂದ ಫೆಬ್ರವರಿ 23ರವರೆಗೆ ರಾಜ್ಯ ವಿಧಾನಮಂಡಲ ಅಧಿವೇಶನ ನಡೆಸಲು ಗುರುವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಬ್ರವರಿ 12ರಿಂದ ಫೆಬ್ರವರಿ 23ರವರೆಗೆ ಅಧಿವೇಶನ ನಡೆಸಲು ಮತ್ತು ಫೆಬ್ರವರಿ 16ರಂದು ರಾಜ್ಯ ಬಜೆಟ್ ಮಂಡಿಸಲು ನಿರ್ಧರಿಸಲಾಗಿದೆ.

ವಿಧಾನಮಂಡಲ ಅಧಿವೇಶನ ಅಧಿವೇಶನದ ಮೊದಲ ದಿನ ಅಂದರೆ ಫೆಬ್ರವರಿ 12 ರಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಜಂಟಿ ಸದನ ಉದ್ದೇಶಿಸಿ ಭಾಷಣ ಮಾಡಲಿದ್ದಾರೆ.

ಲೋಕಸಭೆ ಚುನಾವಣೆಗೆ ಮಾರ್ಚ್‌ನಿಂದಲೇ ನೀತಿ ಸಂಹಿತೆ ಜಾರಿಯಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆಬ್ರವರಿಯಲ್ಲೇ ಬಜೆಟ್ ಮಂಡಿಸಲು ತೀರ್ಮಾನಿಸಿದ್ದಾರೆ.

# ಪ್ರಧಾನಿ ಮೋದಿಯವರಿಗೆ ಸವಾಲು ಹಾಕಿ ಬಹಿರಂಗ ಚರ್ಚೆಗೆ ಆಹ್ವಾನ ನೀಡಿದ ಸಿಎಂ ಸಿದ್ದರಾಮಯ್ಯ

ಕರ್ನಾಟಕ ಮತ್ತು ಕನ್ನಡಿಗರಿಗೆ ಕೇಂದ್ರದ ಬಿಜೆಪಿ ಸರ್ಕಾರದಿಂದ ಆಗುತ್ತಿರುವ ಅನ್ಯಾಯಗಳನ್ನು ಹೇಳುತ್ತಲೇ ಬಂದಿದ್ದೇನೆ. ಇದಕ್ಕೆ ಉತ್ತರ ನೀಡಬೇಕಾಗಿರುವವರು ಪ್ರಧಾನಿ ನರೇಂದ್ರ ಮೋದಿಯವರೇ ಹೊರತು ಬಿಜೆಪಿಯ ಐಟಿ ಸೆಲ್ ಅಲ್ಲ. ಪ್ರಧಾನಿಯವರು ಒಪ್ಪಿ ದಿನ ಮತ್ತು ಸ್ಥಳವನ್ನು ನಿಗದಿಪಡಿಸಿದರೆ ಈ ಬಗ್ಗೆ ಸಾರ್ವಜನಿಕ ಚರ್ಚೆಗೆ ನಾನು ಸಿದ್ದನಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಆಹ್ವಾನ ನೀಡಿದ್ದಾರೆ.

1.ನಾಡಿಗೆ ಬರಗಾಲ ಬಿದ್ದು ಆರು ತಿಂಗಳುಗಳಾಗಿವೆ. ಬರಪರಿಹಾರದ ಕೆಲಸಗಳಿಗಾಗಿ 18,177 ಕೋಟಿ ರೂಪಾಯಿ ನೀಡಲು ಮೂರು ತಿಂಗಳುಗಳಿಂದ ಒತ್ತಾಯಿಸುತ್ತಾ ಬಂದಿದ್ದೇವೆ. ಪತ್ರ ಬರೆದಿದ್ದೇವೆ, ನಾನೇ ಖುದ್ದಾಗಿ ಹೋಗಿ ಪ್ರಧಾನಮಂತ್ರಿಯವರನ್ನು ಭೇಟಿಯಾಗಿ ನಮ್ಮ ರೈತರ ಕಷ್ಟಗಳನ್ನು ವಿವರಿಸಿದ್ದೇನೆ.. ಇಲ್ಲಿಯವರೆಗೆ ಒಂದು ಪೈಸೆ ಪರಿಹಾರ ಬಿಡುಗಡೆ ಮಾಡಿಲ್ಲ.

2.ಯುಪಿಎ ಸರ್ಕಾರದ 14ನೇ ಹಣಕಾಸು ಆಯೋಗವು ಕರ್ನಾಟಕಕ್ಕೆ ನಿಗದಿಪಡಿಸಿದ್ದ ಶೇ.4.72 ತೆರಿಗೆ ಪಾಲನ್ನು ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಾರಿಗೆ ಬಂದ 15ನೇ ಹಣಕಾಸು ಆಯೋಗವು ಶೇ.3.64 ಕ್ಕೆ ಇಳಿಕೆ ಮಾಡಿ ವಂಚಿಸಲಾಗಿದೆ. ಇದರಿಂದ ಕನ್ನಡಿಗರು ಕಳೆದ 4 ವರ್ಷಗಳಲ್ಲಿ ಸುಮಾರು 45,000 ಕೋಟಿ ರೂಪಾಯಿಯಷ್ಟು ಬೆವರಗಳಿಕೆಯಿಂದ ಕಟ್ಟಿದ ತೆರಿಗೆ



ಹಣವನ್ನು ಕಳೆದುಕೊಂಡಿದ್ದಾರೆ.

3.ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿರುವ ಕೇಂದ್ರ ಸರ್ಕಾರದ ಸಹಭಾಗಿತ್ವದ ಯೋಜನೆಗಳಿಗೆ ನೀಡುತ್ತಿರುವ ಅನುದಾನವನ್ನು ವರ್ಷದಿಂದ ವರ್ಷಕ್ಕೆ ಕಡಿತಗೊಳಿಸಲಾಗುತ್ತಿದೆ. 2021-22ರ ಅವಧಿಯಲ್ಲಿ 20 ಸಾವಿರ ಕೋಟಿ ರೂಪಾಯಿ ಇದ್ದ ಅನುದಾನ, 2022-23ರಲ್ಲಿ 13 ಸಾವಿರ ಕೋಟಿ ರೂಪಾಯಿಗೆ ಇಳಿಕೆಯಾಗಿದೆ.

4.ಕರ್ನಾಟಕಕ್ಕೆ 5,495 ಕೋಟಿ ರೂಪಾಯಿ ವಿಶೇಷ ಅನುದಾನ ನೀಡುವಂತೆ 15ನೇ ಹಣಕಾಸು ಆಯೋಗವು ಶಿಫಾರಸು ಮಾಡಿತ್ತು. ಆದರೆ ಹಣಕಾಸು ಸಚಿವರಾಗಿರುವ ನಿರ್ಮಲಾ ಸೀತಾರಾಮನ್ ಅವರು ಈ ಶಿಫಾರಸ್ಸನ್ನು ತಿರಸ್ಕರಿಸಿದ್ದಾರೆ. ಆರ್ಥಿಕ ವರ್ಷ ಆರಂಭವಾಗಿ 6 ತಿಂಗಳು ಕಳೆದರೂ ಕೇಂದ್ರ ಸರ್ಕಾರದ ಸಹಯೋಗದ 61 ಯೋಜನೆಗಳಿಗೆ ಸಂಬಂಧಿಸಿದಂತೆ 23 ಇಲಾಖೆಗಳಿಗೆ ನಯಾಪೈಸೆ ಅನುದಾನ ಬಿಡುಗಡೆಯಾಗಿಲ್ಲ. ಕೃಷ್ಣಾ ಮೇಲ್ದಂಡೆ ಮತ್ತು ಮಹದಾಯಿ ಯೋಜನೆಗಳನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗುತ್ತಿದೆ.

5.ಏಮ್ಸ್ ಸಂಸ್ಥೆ ಬೇಕೆಂಬ ಕನ್ನಡಿಗರ ಕನಸು ಇನ್ನೂ ಕನಸಾಗಿಯೇ ಉಳಿದಿದೆ. ಕನ್ನಡಿಗರು ಶ್ರಮದಿಂದ ಕಟ್ಟಿದ ಬ್ಯಾಂಕುಗಳು ವಿಲೀನದ ಹೆಸರಲ್ಲಿ ಬೇರೆ ರಾಜ್ಯಗಳ ನಷ್ಟದಲ್ಲಿರುವ ಬ್ಯಾಂಕುಗಳ ಜೊತೆ ವಿಲೀನ ಮಾಡಿ ಕನ್ನಡಿಗರಿಗೆ ದ್ರೋಹ ಬಗೆಯಲಾಯಿತು.

6.ನಮ್ಮ ಹಿರೀಕರು ಕಷ್ಟಪಟ್ಟು ನಿರ್ಮಾಣ ಮಾಡಿದ್ದ ವಿಮಾನ ನಿಲ್ದಾಣವನ್ನು ಖಾಸಗಿಯವರಿಗೆ ಮಾರಲಾಯಿತು. ಹದಿನೆಂಟು ಸಾವಿರ ಕೋಟಿ ರೂಪಾಯಿ ಬೆಂಗಳೂರು ಸಬ್ ಅರ್ಬನ್ ರೈಲು ಯೋಜನೆಗೆ ಅನುದಾನ ಇಲ್ಲದೆ ಸೊರಗಿ ಹೋಗಿದೆ. ಇನ್ನು ರಾಜ್ಯದ ಇತರೆ ರೈಲ್ವೇ ಯೋಜನೆಗಳನ್ನು ಮೂಲೆಗೆ ತಳ್ಳಲಾಗಿದೆ ಎಂದು ಅಂಕಿ ಅಂಶಗಳ ಮೂಲಕ ಕೇಂದ್ರ ಸರ್ಕಾರ ಕನ್ನಡಿಗರಿಗೆ, ರಾಜ್ಯಕ್ಕೆ ಮಾಡಿರುವ ಅನ್ಯಾಯದ ಬಗ್ಗೆ ವಿವರಿಸಿದ್ದಾರೆ.

ತೆರೆದ ಪುಸ್ತಕದಲ್ಲಿ ಕಾಣುವ ಈ ಅನ್ಯಾಯಗಳನ್ನು ಕಂಡು ಮೌನವಾಗಿರುವ ಪ್ರಧಾನಿ ನರೇಂದ್ರ ಮೋದಿಯವರ ಪ್ರತಿಕ್ರಿಯೆಯನ್ನು ಹೇಗೆ ವ್ಯಾಖ್ಯಾನಿಸಲಿ? ಉದ್ದೇಶಪೂರ್ವಕವಾದ ನಿರ್ಲಕ್ಷ್ಯ ಎನ್ನಲೇ? ಸಹಜವಾದ ನಿದ್ರಾ ಸ್ಥಿತಿ ಎನ್ನಲೇ? ಎಂದು ಪ್ರಶ್ನಿಸಿದ್ದಾರೆ.

## ಚಿನ್ನದ ಎಲೆ ಬಳಕೆ ಮಾಡಿರುವ ರಾಮ ಮಂದಿರ ಕುರಿತ ಆರು ಅಂಚೆಚೀಟಿ ಬಿಡುಗಡೆ ಮಾಡಿದ ಪ್ರಧಾನಿ ಮೋದಿ



ನವದೆಹಲಿ: ಅಯೋಧ್ಯೆ ರಾಮಮಂದಿರ ಸ್ಮರಣಾರ್ಥ ಅಂಚೆ' ಚೀಟಿಗಳನ್ನು ಮತ್ತು ವಿಶ್ವದಾದ್ಯಂತ ದೇಶಗಳು ಬಿಡುಗಡೆ ಮಾಡಿರುವ ಭಗವಾನ್ ರಾಮನಿಗೆ ಸಮರ್ಪಿತ ಅಂಚೆಚೀಟಿಗಳ ಪುಸ್ತಕವನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಗುರುವಾರ ಬಿಡುಗಡೆ ಮಾಡಿದರು.

ಅಂಚೆಚೀಟಿಗಳ ವಿನ್ಯಾಸದ ಅಂಶಗಳಲ್ಲಿ ರಾಮ ಮಂದಿರ, ಚೌಪೈ (ಪದ್ಯ) 'ಮಂಗಲ್ ಭವನ ಅಮಂಗಲ್ ಹರಿ', ಸೂರ್ಯ, ಸರಯೂ ನದಿ ಮತ್ತು ದೇವಾಲಯದ ಸುತ್ತಮುತ್ತಲಿನ ಶಿಲ್ಪಗಳು ಸೇರಿವೆ.

ಇಂದು ಬಿಡುಗಡೆಯಾದ ಆರು ಸ್ಮರಣಾರ್ಥ ಅಂಚೆಚೀಟಿಗಳು ಅಯೋಧ್ಯೆಯ ರಾಮಮಂದಿರ, ಗಣೇಶ, ಹನುಮಾನ್, ಜಟಾಯು, ಕೇವತ್ರಾಜ್ ಮತ್ತು ಮಾ ಶಬ್ರಿ-ರಾಮನ ನಿರೂಪಣೆಗೆ ಸಂಬಂಧಿಸಿದ ಪ್ರತಿಯೊಂದು ಪ್ರಮುಖ ವ್ಯಕ್ತಿಗಳು ಮತ್ತು ಚಿಹ್ನೆಗಳನ್ನು ಒಳಗೊಂಡಿದೆ.

ಸೂರ್ಯನ ಕಿರಣಗಳನ್ನು ವಿವರಿಸುವ ಚಿನ್ನದ ಎಲೆಗಳ ಬಳಕೆ ಮತ್ತು ಅಂಚೆಚೀಟಿಗಳ ಮೇಲೆ ಕಾಣಿಸಿಕೊಂಡಿರುವ ಚೌಪಾಯಿ ಅಂಚೆಚೀಟಿಗಳಿಗೆ ಭವ್ಯವಾದ ಸ್ಪರ್ಶವನ್ನು ನೀಡುತ್ತದೆ.

ಪಂಚಭೂತಗಳಾದ ಆಕಾಶ, ಗಾಳಿ, ಬೆಂಕಿ, ಭೂಮಿ ಮತ್ತು ನೀರು, ವಿವಿಧ ವಿನ್ಯಾಸ ಅಂಶಗಳ ಮೂಲಕ ಈ ಅಂಚೆಚೀಟಿಗಳು ಪ್ರತಿಫಲಿಸುತ್ತದೆ. ಎಲ್ಲಾ ಅಭಿವ್ಯಕ್ತಿಗಳಿಗೆ ಅಗತ್ಯವಾದ ಪಂಚಮಹಾಭೂತಗಳ ಪರಿಪೂರ್ಣ ಸಾಮರಸ್ಯವನ್ನು ಸ್ಥಾಪಿಸುತ್ತದೆ.

## ಗೃಹಜ್ಯೋತಿ ನಿಯಮದಲ್ಲಿ ಸರ್ಕಾರದಿಂದ ಮಹತ್ವದ ಬದಲಾವಣೆ



ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆಯಲ್ಲಿ ಕಾಂಗ್ರೆಸ್ ಸರ್ಕಾರ ಮಹತ್ವದ ಬದಲಾವಣೆ ಮಾಡುವುದರೊಂದಿಗೆ ಗ್ರಾಹಕರಿಗೆ ಬಿಗ್ ಆಫರ್ ನೀಡಿದೆ.

ಡಿ.18 ನಡೆದ ಸಚಿವ ಸಂಪುಟದಲ್ಲಿ ಶೇಕಡವಾರು 10ರಷ್ಟು ಬದಲು 10 ಯುನಿಟ್ ಫ್ರೀ ವಿದ್ಯುತ್ ನೀಡಲು ತೀರ್ಮಾನಿಸಲಾಗಿದೆ.

ಸಚಿವ ಹೆಚ್.ಕೆ.ಪಾಟೀಲ್ ಈ ಬಗ್ಗೆ ವಿಧಾನಸೌಧದಲ್ಲಿ ಸಂಪುಟ ಸಭೆ ಬಳಿಕ ಮಾಹಿತಿ ನೀಡಿದ್ದಾರೆ. ಈ ಮೊದಲು ಗೃಹ ಜ್ಯೋತಿ ಯೋಜನೆ ಅಡಿ ಬಳಸಿದ ಯುನಿಟ್ಗಿಂತ ಶೇ. 10ರಷ್ಟು ರಿಯಾಯಿತಿ ನೀಡಲಾಗಿತ್ತು. ಇದೀಗ ಶೇಕಡವಾರು ಬದಲಾಗಿ 10 ಯುನಿಟ್ ನೀಡಲು ಸರ್ಕಾರ ತೀರ್ಮಾನಿಸಿದೆ ಎಂದರು.

ಮುಂದಿನ ತಿಂಗಳ ಬಿಲ್ ನಿಂದಲೇ ಇದನ್ನ ಜಾರಿ ಮಾಡ್ತೀವಿ. ಸರ್ಕಾರಕ್ಕೆ ಇದರಿಂದ 500 ಕೋಟಿ ವಾರ್ಷಿಕ ಹೆಚ್ಚುವರಿ ಹಣ ಖರ್ಚಾಗಲಿದೆ.

(ಉದಾಹರಣೆ : 20 ಯುನಿಟ್ ವಿದ್ಯುತ್ ಬಳಕೆ ಮಾಡೋ ಗ್ರಾಹಕನಿಗೆ 10% ಅಂದರೆ 2 ಯುನಿಟ್ ಮಾತ್ರ ಹೆಚ್ಚುವರಿ ಸಿಗುತ್ತಿತ್ತು. ಈಗ 10 ಯುನಿಟ್ ಕೊಡುವುದರಿಂದ 20+10 ಸೇರಿ 30 ಯುನಿಟ್ ವಿದ್ಯುತ್ ಆಗಲಿದೆ.)

## ಪ್ರಧಾನಿ ಮೋದಿ ಇಂದು ಬೆಂಗಳೂರಿಗೆ



ಬೆಂಗಳೂರು: ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಇಂದು ಜನವರಿ 19ರಂದು ಬೆಂಗಳೂರು ಹೊರವಲಯ ದೇವನಹಳ್ಳಿಗೆ ಭೇಟಿ ನೀಡುತ್ತಿದ್ದು, ಅವರ ಆಗಮನ ಹಿನ್ನೆಲೆಯಲ್ಲಿ ಸಂಚಾರ ಮಾರ್ಗ ಬದಲಾವಣೆ ಮಾಡಿ ಬೆಂಗಳೂರು ನಗರ ಸಂಚಾರ ಪೊಲೀಸರು ಆದೇಶ ಹೊರಡಿಸಿದ್ದಾರೆ.

ಪ್ರಧಾನಿ ಮೋದಿ ಅವರು ನಾಳೆ ಮಧ್ಯಾಹ್ನ 2:10 ಕ್ಕೆ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು (ಏಖಂ) ತಲುಪಲಿದ್ದಾರೆ. ಬೆಂಗಳೂರು ಸಂಚಾರ ಪೊಲೀಸರು ಇಂದು ಹೆಣ್ಣೂರು- ಬಾಗಲೂರು ರಸ್ತೆ (ಹೊಸ ವಿಮಾನ ನಿಲ್ದಾಣ ರಸ್ತೆ) ಮತ್ತು ಕೆಐಎಗೆ ಹೋಗುವ ಇತರ ರಸ್ತೆಗಳಲ್ಲಿ ಸಂಚಾರ ವ್ಯತ್ಯಯ ಘೋಷಿಸಿದ್ದಾರೆ.

## ಅಪ್ಪ-ಅಮ್ಮ ಗೊತ್ತಿಲ್ಲದವರು ಜಾತ್ಯತೀತ ಅಂತಾ ಹೇಳ್ತಾರೆ; ರಾಮ ಮಂದಿರ ಕಟ್ಟಿದ್ದು ಹಿಂದೂಗಳು: ಅನಂತ್ ಕುಮಾರ್ ಹೆಗಡೆ

ಬೆಳಗಾವಿ: ನಾವು ಮೊದಲು ಹಿಂದೂಗಳು. ಈಗಲೂ ಸಾಕಷ್ಟು ಜನ ತಕ್ಷಣ ಕೇಳಿದರೆ ಅವರ ಜಾತಿ ಹೆಸರು ಹೇಳುತ್ತಾರೆ. ಹಿಂದೂ ಅಂತಾ ನೆನಪು ಮಾಡಿಕೊಂಡು ಹೇಳ್ತಾರೆ. ಸಂಸ್ಕಾರ ಇದ್ರೇ ಹಿಂದೂ ಅಂತಾ ಹೇಳ್ತಾರೆ. ಅಪ್ಪ ಅಮ್ಮ ಗೊತ್ತಿಲ್ಲದವರು ಜಾತ್ಯತೀತ ಅಂತಾ ಹೇಳ್ತಾರೆ ಎಂದು ಎಂದು ಮತ್ತೊಮ್ಮೆ ಸಂಸದ ಅನಂತ್ ಕುಮಾರ್ ಹೆಗಡೆ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಖಾನಾಪುರ ಪಟ್ಟಣದಲ್ಲಿ ಮಾತನಾಡಿದ ಅವರು, ಈಗಾಗಲೇ ರಾಮ ಮಂದಿರ ಉದ್ಘಾಟನೆ ಅಕ್ಷತೆ ಮನೆ ಮನೆಗೆ ಹೋಗಿದೆ. ಐನೂರು ವರ್ಷದ ನಂತರ ನಮಗೆ ಜಯ ಸಿಕ್ಕಿದೆ. ರಾಮ ಮಂದಿರವನ್ನು ಯಾರೋ ಉದ್ಯಮಿ, ಕೈಗಾರಿಕೋದ್ಯಮಿಗಳು ಕಟ್ಟಿಲ್ಲ. ಹಳ್ಳಿ ಹಳ್ಳಿಯಿಂದ ಇಟ್ಟಿಗೆ ಕಳಿಸಿದ್ದೇವೆ, ಇಡೀ ದೇಶದ ಜನ ಜಾಗೃತರಾಗಿ ಕಟ್ಟಿದ್ದು. ಅಯೋಧ್ಯೆ ಹಿಂದೂಗಳ ಪ್ರತೀಕ, ಸೌರಾಷ್ಟ್ರದ ಸೋಮನಾಥ ದೇವಾಲಯ ಸರ್ಕಾರ ಕಟ್ಟಿದ್ದು. ರಾಮ ಮಂದಿರ ಸರ್ಕಾರ ಕಟ್ಟಿಲ್ಲ, ಹಿಂದೂಗಳು ಕಟ್ಟಿದ್ದಾರೆ. ಅಪಮಾನವನ್ನು



ತೊಳೆದು ರಾಮ ಮಂದಿರ ಕಟ್ಟಲಾಗಿದೆ. ನಾವು ಹಿಂದೂಗಳು ಎಂದು ಮರೆತು ಹೋಗಿತ್ತು. ಈಗಲೂ ಸಾಕಷ್ಟು ಜನ ತಕ್ಷಣ ಕೇಳಿದ್ರೆ ಅವರ ಜಾತಿ ಹೆಸರು ಹೇಳ್ತಾರೆ. ಹಿಂದೂ ಅಂತಾ ನೆನಪು ಮಾಡಿಕೊಂಡು ಹೇಳ್ತಾರೆ. ಸಂಸ್ಕಾರ ಇದ್ದರೆ ಹಿಂದೂ ಅಂತಾ ಹೇಳ್ತಾರೆ. ಕೆಲವು ಮಂದಿ ಜಾತ್ಯತೀತ ಅಂತಾ ಹೇಳ್ತಾರೆ. ಅಪ್ಪ ಅಮ್ಮ ಗೊತ್ತಿಲ್ಲದವರು ಜಾತ್ಯಾತೀತ ಅಂತಾ ಹೇಳ್ತಾರೆ ಎಂದು ಪರೋಕ್ಷವಾಗಿ ಸಿದ್ದರಾಮಯ್ಯ ವಿರುದ್ಧ ಮತ್ತೊಮ್ಮೆ ಅನಂತ್ ಕುಮಾರ್ ಹೆಗಡೆ ವಾಗ್ದಾಳಿ ನಡೆಸಿದ್ದಾರೆ.

ಜಾತಿ ಹೆಸರಲ್ಲಿ, ಭಾಷೆ ಹೆಸರಲ್ಲಿ ನಮ್ಮನ್ನು ಒಡೆಯಲಾಗಿದೆ. ಮರಾಠಿ, ಕನ್ನಡ ಒಂದಾಗುತ್ತಾರೆ ಅಂದರೆ ಕತ್ತಿ ತಗೊಂಡು ಬರ್ತಾರೆ. ಈ ರೀತಿ ಒಡೆದು ಇಟ್ಟರೆ ಅವರ ರಾಜಕಾರಣ ನಡೆಯುವುದು. ಸ್ವಾತಂತ್ರ್ಯದ ನಂತರ ಮರಾಠಿ-ಕನ್ನಡ ಜಗಳ ಶುರುವಾಯಿತು. ಸ್ವಾತಂತ್ರ್ಯ ನಂತರ ಎಲ್ಲದರಲ್ಲೂ ನಮ್ಮನ್ನು ಒಡೆದರು. ಇದರ ಹೊರತಾಗಿ ಒಟ್ಟಾಗಿ ಒಂದಾಗಿ ಹಿಂದೂ ಹೆಸರಲ್ಲಿ ಎದ್ದು ನಿಂತೆವು. ರಣ ಭೈರವ ರೀತಿಯಲ್ಲಿ ನಾವು ಈಗ ಏಳುತ್ತಿದ್ದೇವೆ. ನಾವು ಏಳ್ತಾಯಿದೀವಿ ಅಂದ ತಕ್ಷಣ ಇಡೀ ಜಗತ್ತು ಅಲ್ಲಾಡಿದೆ. ಐನೂರು ವರ್ಷದ ಪಾಪವನ್ನು ಇಂದು ತೊಳೆದುಕೊಂಡು ರಾಮ ಮಂದಿರ ಕಟ್ಟುತ್ತಿದ್ದೇವೆ. ಇನ್ನೂ ಕಾಶಿ ಇದೆ, ಮಥುರಾ ಇದೆ ಹಳ್ಳಿ ಹಳ್ಳಿಗಳಲ್ಲಿ ಅಪಮಾನ ಆದ ತುಂಬಾ ದೇವಸ್ಥಾನ ಇವೆ. ಹಳ್ಳಿ ಹಳ್ಳಿಯಲ್ಲಿ ಆಗಿರುವ ಅಪಮಾನ ಸೇಡು ತೀರಿಸಿಕೊಳ್ಳಬೇಕು ಎಂದರು.



## ಕೇಜ್ರಿವಾಲ್ ದೆಹಲಿ ಅಬಕಾರಿ ಹಗರಣದ 'ಕಿಂಗ್‌ಪಿನ್': ಬಿಜೆಪಿ

ನವದೆಹಲಿ: ಜಾರಿ ನಿರ್ದೇಶನಾಲಯದ ಸಮನ್ಸ್‌ಗಳನ್ನು ಪದೇ ಪದೇ ನಿರ್ಲಕ್ಷಿಸುತ್ತಿರುವ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ತರಾಟೆಗೆ ತೆಗೆದುಕೊಂಡಿರುವ ಬಿಜೆಪಿ, ಕೇಜ್ರಿವಾಲ್ ಆಪಾದಿತ ಅಬಕಾರಿ ಹಗರಣದ 'ಕಿಂಗ್‌ಪಿನ್' ಆಗಿರುವುದರಿಂದಲೇ ಅವರಿಗೆ ಬಂಧನದ ಭಯವಿದೆ ಎಂದು ಆರೋಪಿಸಿದೆ.

ಆಪಾದಿತ ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ತನಿಖಾ ಸಂಸ್ಥೆ ನೀಡಿದ ನಾಲ್ಕನೇ ಸಮನ್ಸ್ ಅನ್ನು ಕೇಜ್ರಿವಾಲ್ ನಿರ್ಲಕ್ಷಿಸಿದ್ದಾರೆ.

ಈ ಪ್ರಕರಣದಲ್ಲಿ ಕೇಜ್ರಿವಾಲ್ ಆರೋಪಿಯಲ್ಲದಿದ್ದರೆ ಅವರಿಗೆ ಏಕೆ ಸಮನ್ಸ್ ನೀಡಲಾಯಿತು ಎಂದು ಕೇಳಿದೆ.

ಪಕ್ಷದ ಪ್ರಧಾನ ಕಛೇರಿಯಲ್ಲಿ ಪತ್ರಿಕಾಗೋಷ್ಠಿ ಯನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ರಾಷ್ಟ್ರೀಯ ವಕ್ತಾರ ಗೌರವ್ ಭಾಟಿಯಾ, ಕೇಜ್ರಿವಾಲ್ ಅವರು ಚಳಿಗಾಲದಲ್ಲೂ 'ಬೆವರು' ಮತ್ತು 'ಭಯದಿಂದ ನಡುಗುತ್ತಿದ್ದಾರೆ'. ಏಕೆಂದರೆ ಅವರು ಅಬಕಾರಿ ಕಿಂಗ್‌ಪಿನ್ ಎಂದು ತಿಳಿದಿರುವ ಕಾರಣ ಅವರ ಬಂಧನದ ನಿರೀಕ್ಷೆಯಲ್ಲಿ ಇಡಿ ಮುಂದೆ ಹಾಜರಾಗಲು ಹಿಂಜರಿಯುತ್ತಿದ್ದಾರೆ ಎಂದು ಆರೋಪಿಸಿದರು.

ಕೇಜ್ರಿವಾಲ್‌ಗೆ ಇಡಿ ಸಮನ್ಸ್ ನೀಡಿರುವುದನ್ನು ಸಮರ್ಥಿಸಿಕೊಂಡಿರುವ ಭಾಟಿಯಾ, ಆಮ್ ಆದ್ಮಿ ಪಕ್ಷದ(ಎಎಪಿ) ರಾಷ್ಟ್ರೀಯ ಸಂಚಾಲಕರಾಗಿರುವ ಕೇಜ್ರಿವಾಲ್ ಅವರು ಸಮನ್ಸ್‌ಗಳನ್ನು ನಿರ್ಲಕ್ಷಿಸುತ್ತಿರುವ ಬದಲು ತನಿಖಾ ಸಂಸ್ಥೆಯ ಸಮನ್ಸ್‌ಗಳನ್ನು ಪ್ರಶ್ನಿಸಿ ನ್ಯಾಯಾಲಯವನ್ನು ಏಕೆ ಹೋಗುತ್ತಿಲ್ಲ ಎಂದು ಪ್ರಶ್ನಿಸಿದರು.

ಮದ್ಯದ ಹಗರಣದ ಕಿಂಗ್‌ಪಿನ್ ಕಂಬಿಗಳ ಹಿಂದೆ ಹೋಗುವುದು ಈಗ ಖಚಿತವಾಗಿದೆ ಎಂದು ಬಿಜೆಪಿ ವಕ್ತಾರರು ಹೇಳಿದ್ದಾರೆ.


## ಚುನಾವಣೆಗೆ ಸ್ಪರ್ಧಿಸಲು ಸುಳ್ಳು ಜಾತಿ ಪ್ರಮಾಣ ಪತ್ರ ಒದಗಿಸಿದ ಮಾಜಿ ಶಾಸಕ: ಹೈಕೋರ್ಟ್

ಬೆಂಗಳೂರು: ಮುಳಬಾಗಲು ಮಾಜಿ ಶಾಸಕ ಜಿ.ಮಂಜುನಾಥ ಅವರು ಬುಡಗ ಜಂಗಮ, ಪರಿಶಿಷ್ಟ ಜಾತಿಗೆ ಸೇರಿದವರಲ್ಲ, ಒಬಿಸಿ ಗುಂಪಿಗೆ ಬರುವ ಬೈರಾಗಿ ಜಾತಿಗೆ ಸೇರಿದವರು ಎಂದು ಸ್ಪಷ್ಟಪಡಿಸಿರುವ ಜಿಲ್ಲಾ ಜಾತಿ ಪರಿಶೀಲನಾ ಸಮಿತಿಯ (ಡಿಸಿವಿಸಿ) ನಿರ್ಣಯದಲ್ಲಿ ಯಾವುದೇ ದೋಷ ಕಂಡು ಬರುವುದಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಹೇಳಿದೆ.

"ಅರ್ಜಿದಾರರು ಸುಳ್ಳು ಜಾತಿ ಪ್ರಮಾಣ ಪತ್ರದ ಮೇಲೆ ಚುನಾವಣೆಗೆ ಸ್ಪರ್ಧಿಸಿದ್ದು, ಪರಿಶಿಷ್ಟ ಜಾತಿಗೆ ಸೇರಿದ ವ್ಯಕ್ತಿಗೆ ಮೀಸಲಾದ ಕ್ಷೇತ್ರವನ್ನು ಕಸಿದುಕೊಂಡು ಶಾಸಕರೂ ಆಗಿರುವುದು ಸ್ಪಷ್ಟ ಪ್ರಕರಣವಾಗಿದೆ.

ಇದು ಸಂವಿಧಾನ ವಿರೋಧಿಯಾಗಿದ್ದು, ಅರ್ಜಿದಾರರ ವಿರುದ್ಧ ಕ್ರಮ ಕೈಗೊಳ್ಳಬೇಕು, ಕಾನೂನು ಪ್ರಕಾರ ಆದೇಶದ ಸಂದರ್ಭದಲ್ಲಿ ಮಾಡಲಾದ ಅವಲೋಕನಗಳನ್ನು ಗಮನದಲ್ಲಿಟ್ಟು ಕೊಂಡು ಕ್ರಮ ಕೈಗೊಳ್ಳಲು ರಾಜ್ಯಕ್ಕೆ ಮುಕ್ತವಾಗಿ ಬಿಡುತ್ತೇನೆ ಎಂದು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಹೇಳಿದರು.

ಮಂಜುನಾಥ ಅವರು ಬುಡಗ ಜಂಗಮ ಜಾತಿಗೆ ಸೇರಿದವರಲ್ಲ ಎಂದು ಡಿಸಿವಿಸಿ 2021ರ ಅಕ್ಟೋಬರ್ 27ರಂದು ಸಲ್ಲಿಸಿದ್ದ



ವರದಿಯಲ್ಲಿನ ಅಂಶಗಳನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಿದ ನ್ಯಾಯಾಲಯ ಈ ಆದೇಶ ನೀಡಿದೆ.

ಬುಡಗ ಜಂಗಮ ಜಾತಿಗೆ ಸೇರಿದವರು ಎಂದು ಸಾಬೀತುಪಡಿಸಲು ಅರ್ಜಿದಾರರಿಂದ ಯಾವುದೇ ದಾಖಲೆಗಳಿಲ್ಲ ಎಂದು ನ್ಯಾಯಾಲಯ ಹೇಳಿದೆ. 2013ರ ವಿಧಾನಸಭಾ ಚುನಾವಣೆಯಲ್ಲಿ ಕೋಲಾರದ ಮುಳಬಾಗಲು ಮೀಸಲು ಕ್ಷೇತ್ರದ ಪಕ್ಷೇತರ ಶಾಸಕರಾಗಿ ಮಂಜುನಾಥ ಅವರನ್ನು ಆಯ್ಕೆ ಮಾಡಿದ್ದನ್ನು ಪ್ರಶ್ನಿಸಿ 2013ರಲ್ಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿತ್ತು. 2018ರಲ್ಲಿ ಅರ್ಜಿದಾರರು ಬುಡಗ ಜಂಗಮ ಜಾತಿಗೆ ಸೇರಿದವರಲ್ಲ ಬದಲಿಗೆ ಬೈರಾಗಿ ಜಾತಿಗೆ ಸೇರಿದವರು ಎಂದು ಹೈಕೋರ್ಟ್ ನೀಡಿದ್ದ ಆದೇಶವನ್ನು ಅರ್ಜಿದಾರರು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿದ್ದಾರೆ.

## ಡಿಎಂಕೆ ರಾಮಮಂದಿರದ ವಿರೋಧಿಯಲ್ಲ; ಮಸೀದಿ ಕೆಡವಿ, ಮಂದಿರ ನಿರ್ಮಾಣ ಒಪ್ಪಲಾಗದು: ಉದಯನಿಧಿ ಸ್ಟಾಲಿನ್



ಚೆನ್ನೈ: ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಮಾಡುವುದನ್ನು ಡಿಎಂಕೆ ವಿರೋಧಿಸುವುದಿಲ್ಲ ಆದರೆ ಮಸೀದಿ ಕೆಡವಿ ನಂತರ ದೇವಾಲಯವನ್ನು ನಿರ್ಮಿಸುವುದನ್ನು ಒಪ್ಪಲಾಗದು ತಮಿಳು ನಾಡು ಸಚಿವ ಉದಯನಿಧಿ ಸ್ಟಾಲಿನ್ ಹೇಳಿದ್ದಾರೆ.

ಚೆನ್ನೈನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, , ಡಿಎಂಕೆ ಯಾವುದೇ ನಂಬಿಕೆ ಅಥವಾ ಧರ್ಮವನ್ನು ವಿರೋಧಿಸುವುದಿಲ್ಲ, ಆದರೆ ಮಸೀದಿ ಕೆಡವಿ ಮಂದಿರ ಕಟ್ಟುವುದನ್ನು ನಾವು ಒಪ್ಪುವುದಿಲ್ಲ ಎಂದಿದ್ದಾರೆ.

ಡಿಎಂಕೆ ಯಾವುದೇ ನಂಬಿಕೆ ಅಥವಾ ಧರ್ಮವನ್ನು ವಿರೋಧಿಸುವುದಿಲ್ಲ ಎಂದು ಕರುಣಾನಿಧಿ ಅವರು ಯಾವಾಗಲೂ ಹೇಳುತ್ತಿದ್ದರು, ಮಂದಿರ ಕಟ್ಟುವುದು ಸಮಸ್ಯೆಯಲ್ಲ, ಆದರೆ ಮಸೀದಿ ಕೆಡವಿ ಅಲ್ಲಿ ಮಂದಿರ ನಿರ್ಮಿಸುವುದನ್ನು ನಾವು ಒಪ್ಪುವುದಿಲ್ಲ, ಆಧ್ಯಾತ್ಮಿಕತೆ ಮತ್ತು ರಾಜಕೀಯವನ್ನು ಬೆರೆಸಬೇಡಿ ಎಂದು ಉದಯನಿಧಿ ತಿಳಿಸಿದ್ದಾರೆ.

1992 ರಲ್ಲಿ ಬಾಬರಿ ಮಸೀದಿ ಧ್ವಂಸವನ್ನು ಉಲ್ಲೇಖಿಸಿದ ಉದಯನಿಧಿ ಸ್ಟಾಲಿನ್ ಅಲ್ಲಿ ದೇವಸ್ಥಾನ ಬರುವುದರಿಂದ ನಮಗೆ ಸಮಸ್ಯೆ ಇಲ್ಲ. ಮಸೀದಿ ಕೆಡವಿದ ನಂತರ ಮಂದಿರ ನಿರ್ಮಾಣಕ್ಕೆ ನಾವು ಒಪ್ಪುವುದಿಲ್ಲ ಎಂದು ಹೇಳಿದರು. ಅಯೋಧ್ಯೆಯ ರಾಮ ಜನ್ಮಭೂಮಿಯಲ್ಲಿರುವ ಭವ್ಯ ಮಂದಿರದ ಶಂಕುಸ್ಥಾಪನೆ ಜನವರಿ 22 ರಂದು ನಡೆಯಲಿದೆ.

## ರಾಮ ಮಂದಿರ ಉದ್ಘಾಟನೆ: ಜನವರಿ 22 ರಂದು ಕೇಂದ್ರ ಸರ್ಕಾರಿ ಕಚೇರಿಗಳಿಗೆ ಅರ್ಧದಿನ ರಜೆ ಘೋಷಣೆ



ನವದೆಹಲಿ: ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಜನವರಿ 22 ರಂದು ದೇಶದಾದ್ಯಂತ ಎಲ್ಲಾ ಕೇಂದ್ರ ಸರ್ಕಾರಿ ಕಚೇರಿಗಳಿಗೆ ಅರ್ಧದಿನ ರಜೆ ಘೋಷಿಸಿ ಕೇಂದ್ರ ಸಿಬ್ಬಂದಿ ಸಚಿವಾಲಯ ಗುರುವಾರ ಆದೇಶ ಹೊರಡಿಸಿದೆ.

ರಾಮ ಮಂದಿರದ ಗರ್ಭಗುಡಿಯಲ್ಲಿ ರಾಮಲಲ್ಲಾನ ನೂತನ ವಿಗ್ರಹದ 'ಪ್ರಾಣ ಪ್ರತಿಷ್ಠಾಪನೆ' ಸಮಾರಂಭವನ್ನು ಸೋಮವಾರ ನಿಗದಿಪಡಿಸಲಾಗಿದೆ. ಸಮಾರಂಭವನ್ನು ಪ್ರಧಾನಿ ನರೇಂದ್ರ ಮೋದಿ ನೆರವೇರಿಸಲಿದ್ದಾರೆ.

"ಅಯೋಧ್ಯೆಯಲ್ಲಿ ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆಯನ್ನು ದೇಶದಾದ್ಯಂತ 22ನೇ ಜನವರಿ 2024 ರಂದು ಆಚರಿಸಲಾಗುತ್ತಿದೆ. ನೌಕರರು ಸಹ ಈ ಸಂಭ್ರಮದಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ದೇಶಾದ್ಯಂತ ಎಲ್ಲಾ ಕೇಂದ್ರ ಸರ್ಕಾರಿ ಕಚೇರಿಗಳು, ಕೇಂದ್ರ ಸಂಸ್ಥೆಗಳು ಮತ್ತು ಕೇಂದ್ರ ಕೈಗಾರಿಕಾ ಸಂಸ್ಥೆಗಳ ನೌಕರರಿಗೆ ಅರ್ಧ ದಿನ ರಜೆ ನೀಡಲು ನಿರ್ಧರಿಸಲಾಗಿದೆ. 2024 ರ ಜನವರಿ 22 ರಂದು ಮಧ್ಯಾಹ್ನ 2.30 ರವರೆಗೆ ರಜೆ ನೀಡಲಾಗಿದೆ" ಎಂದು ಕೇಂದ್ರ ಸರ್ಕಾರದ ಸಚಿವಾಲಯಗಳು / ಇಲಾಖೆಗಳಿಗೆ ಹೊರಡಿಸಿದ ಆದೇಶದಲ್ಲಿ ತಿಳಿಸಲಾಗಿದೆ.

# ಕ್ಷೇತ್ರ ಹಂಚಿಕೆ: ಅಮಿತ್ ಶಾ-ಎಚ್‌ಡಿಕೆ ಚರ್ಚೆ

ನವದೆಹಲಿ:* ಮುಂಬರುವ ಲೋಕಸಭೆ ಚುನಾವಣೆಗೆ ಸಿದ್ಧತೆಗೆ ಸಂಬಂಧಿಸಿ ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಅವರೊಂದಿಗೆ ಮಾಜಿ ಮುಖ್ಯಮಂತ್ರಿ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷರಾದ ಹೆಚ್.ಡಿ.ಕುಮಾರಸ್ವಾಮಿ ಅವರು ನವದೆಹಲಿಯಲ್ಲಿ ಇಂದು ಸಂಜೆ ಮಹತ್ವದ ಮಾತುಕತೆ ನಡೆಸಿದರು.

ಅಮಿತ್ ಶಾ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿಗಳ ಜತೆಯಲ್ಲಿ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹಾಗೂ ಮಾಜಿ ಸಂಸದ ಕುಪೇಂದ್ರ ರೆಡ್ಡಿ ಅವರೂ ಭಾಗಿಯಾಗಿದ್ದರು.

ಅಮಿತ್ ಶಾ ಅವರ ಜತೆ ಮೈತ್ರಿಯ ವಿಷಯವೂ ಸೇರಿ ರಾಜ್ಯ ರಾಜಕೀಯದ ಬಗ್ಗೆ ಸುಮಾರು 45 ನಿಮಿಷಕ್ಕೂ ಹೆಚ್ಚು ಕಾಲ ದೀರ್ಘ ಸಮಾಲೋಚನೆ ನಡೆಸಿದ ಮಾಜಿ ಮುಖ್ಯಮಂತ್ರಿಗಳು; ಕರ್ನಾಟಕದ



ಪ್ರತಿಯೊಂದು ವಿದ್ಯಮಾನವನ್ನು ಅವರ ಗಮನಕ್ಕೆ ತಂದರು.

ಕ್ಷೇತ್ರ ಹಂಚಿಕೆಯ ಸೇರಿದಂತೆ ಜೆಡಿಎಸ್ ಪಕ್ಷ ಅಧಿಕೃತವಾಗಿ ಎನ್ ಡಿ ಎ ಮೈತ್ರಿಕೂಟಕ್ಕೆ ಸೇರುವ ಪ್ರಕ್ರಿಯೆಗಳೆಲ್ಲವನ್ನು ಅಯೋಧ್ಯೆಯಲ್ಲಿ ಶ್ರೀರಾಮ ದೇವರ ಪ್ರಾಣ ಪ್ರತಿಷ್ಠೆ ಕಾರ್ಯಕ್ರಮ ಮುಗಿದ ನಂತರ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರ ಜತೆ ಕೂತು ಚರ್ಚೆ ನಡೆಸಿದ ನಂತರ ಅಂತಿಮಗೊಳಿಸೋಣ ಎಂದು ಅಮಿತ್ ಶಾ ಅವರು ಮಾಜಿ ಮುಖ್ಯಮಂತ್ರಿಗಳಿಗೆ ಹೇಳಿದರು.

ಅಲ್ಲದೆ; ರಾಜ್ಯದ 28 ಲೋಕಸಭೆ ಕ್ಷೇತ್ರಗಳೆಲ್ಲವನ್ನೂ ಎನ್ ಡಿ ಎ ಮೈತ್ರಿಕೂಟ ಗೆದ್ದು ಮತ್ತೊಮ್ಮೆ ನರೇಂದ್ರ ಮೋದಿ ಅವರು ಭಾರತದ ಪ್ರಧಾನಮಂತ್ರಿ ಆಗಬೇಕು. ಅದಕ್ಕಾಗಿ ಕರ್ನಾಟಕದಲ್ಲಿ ಏನೆಲ್ಲಾ ಮಾಡಬೇಕೋ ಅದೆಲ್ಲವನ್ನೂ ಒಟ್ಟಾಗಿ ಮಾಡೋಣ. ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳೆರಡು ಅತ್ಯಂತ ವಿಶ್ವಾಸ, ನಂಬಿಕೆಯ ಆಧಾರದ ಚುನಾವಣೆ ಎದುರಿಸುವ ನಿಟ್ಟಿನಲ್ಲಿ ಎಲ್ಲಾ ನಿರ್ಧಾರಗಳನ್ನು ಮಾಡೋಣ ಎಂದು ಶಾ ಅವರು ಕುಮಾರಸ್ವಾಮಿ ಅವರಿಗೆ ತಿಳಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರಕ್ಕೆ ಒಂದು ವರ್ಷ ತುಂಬುವುದಕ್ಕೆ ಮೊದಲೇ ಆಡಳಿತ ವಿರೋಧಿ ಅಲೆ ಸೃಷ್ಟಿಯಾಗಿದೆ. ಜನರು ಇನ್ನಿಲ್ಲದ ಸಂಕಷ್ಟ ಅನುಭವಿಸುತ್ತಿದ್ದಾರೆ. ರಾಜ್ಯ ಸರಕಾರದ ವೈಫಲ್ಯಗಳನ್ನು ಜನರ ಗಮನಕ್ಕೆ ಪರಿಣಾಮಕಾರಿಯಾಗಿ ತರುವ ನಿಟ್ಟಿನಲ್ಲಿ ಇಬ್ಬರೂ ನಾಯಕರು ಚರ್ಚೆ ನಡೆಸಿದರು.

ಮಾತುಕತೆಯ ಬಗ್ಗೆ ಸಂತಸ ವ್ಯಕ್ತಪಡಿಸಿರುವ ಮಾಜಿ ಮುಖ್ಯಮಂತ್ರಿಗಳು; ರಾಜ್ಯದಲ್ಲಿ ಉಂಟಾಗಿರುವ ಭೀಕರ ಬರದ ಬಗ್ಗೆಯೂ ಗೃಹ ಸಚಿವರ ಗಮನಕ್ಕೆ ತಂದಿದ್ದೇನೆ. ರಾಜ್ಯ ಸರಕಾರ ಈವರೆಗೂ ಬಿಡಿಗಾಸನ್ನು ಬರಪೀಡಿತ ಜನರಿಗೆ ಕೊಟ್ಟಿಲ್ಲ ಎನ್ನುವುದು ಅವರಿಗೆ ಗೊತ್ತಿದೆ. ಈ ಬಗ್ಗೆ ಶಾ ಅವರಿಗೆ ಎಲ್ಲಾ ಮಾಹಿತಿ ನೀಡಿದ್ದೇನೆ ಎಂದು ಹೇಳಿದ್ದಾರೆ.

ಮುಕ್ಕಾಲು ಗಂಟೆ ಕಾಲ ನಡೆದ ಈ ಸಭೆಯಲ್ಲಿ ಗೃಹ ಸಚಿವರ ಜತೆ ಎಲ್ಲಾ ವಿಷಯಗಳನ್ನು ಮುಕ್ತವಾಗಿ ಚರ್ಚೆ ಮಾಡಿದ್ದೇನೆ. ಕೇಂದ್ರದಲ್ಲಿ ಎನ್ ಡಿ ಎ ಮೈತ್ರಿಕೂಟ ಅಧಿಕಾರಕ್ಕೆ ಬಂದು ಮತ್ತೊಮ್ಮೆ ನರೇಂದ್ರ ಮೋದಿ ಅವರು ಪ್ರಧಾನಿ ಆಗಬೇಕು. ಈ ಬಗ್ಗೆ ಜೆಡಿಎಸ್ ಮತ್ತು ಬಿಜೆಪಿ ಒಟ್ಟಾಗಿ ಕೆಲಸ ಮಾಡುವ ಬಗ್ಗೆ ಮಾತುಕತೆ ನಡೆಸಿದ್ದೇವೆ.

## ಲೋಕಸಭೆ ಚುನಾವಣೆ–2024 ಜಾಗೃತಿ ವ್ಯಂಗ್ಯ ಚಿತ್ರಗಳ ಆಯ್ಕೆ

ಬೆಳಗಾವಿ: ಬೆಂಗಳೂರು, ಜನವರಿ 18 ಮುಂಬರುವ ಲೋಕಸಭೆ ಚುನಾವಣೆ–2024 ರ ಹಿನ್ನೆಲೆಯಲ್ಲಿ ಮತದಾರರಲ್ಲಿ ಮತದಾನದ ಕುರಿತು ಜಾಗೃತಿ ಮೂಡಿಸಲು ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳ ಕಚೇರಿವತಿಯಿಂದ ಜನವರಿ 21 ರಂದು ಬೆಳಗ್ಗೆ 9 ಗಂಟೆಯಿಂದ ಕಲಾವಿದರಿಗಾಗಿ 'ವ್ಯಂಗ್ಯಚಿತ್ರ ಪ್ರದರ್ಶನ ಮತ್ತು ಕಾರ್ಯಾಗಾರ'ವನ್ನು ವಿಧಾನಸೌಧ ಪೂರ್ವದಿಕ್ಕಿನ ಬಸವಣ್ಣನ ಪ್ರತಿಮೆ ಎದುರುಗಡೆಯಲ್ಲಿ ಏರ್ಪಡಿಸಲಾಗಿದೆ.

ವೃತ್ತಿಪರ ಮತ್ತು ಹವ್ಯಾಸಿ ವ್ಯಂಗ್ಯಚಿತ್ರಕಾರರು, ಹವ್ಯಾಸಿ ಕಲಾವಿದರು, ಕಲಾ ವಿದ್ಯಾರ್ಥಿಗಳು ಈ ಜಾಗೃತಿ ಅಭಿಯಾನದಲ್ಲಿ ಭಾಗವಹಿಸಬಹುದಾಗಿದೆ.

ಚುನಾವಣೆ, ಮತದಾನದ ಮಹತ್ವ ಸಾರುವ, ಮತದಾನ ಪ್ರಕ್ರಿಯೆಯಲ್ಲಿ ನಾಗರಿಕರು ಭಾಗವಹಿಸುವುದನ್ನು ಪ್ರೋತ್ಸಾಹಿಸುವಂತಹ ವ್ಯಂಗ್ಯಚಿತ್ರಗಳನ್ನು ರಚಿಸಬೇಕು. ಆಯ್ಕೆಯಾದ 100 ವ್ಯಂಗ್ಯಚಿತ್ರಗಳನ್ನು ಜ.21ರಂದು ಪ್ರದರ್ಶನಕ್ಕೆ ಇರಿಸಲಾಗುತ್ತದೆ. ಅತ್ಯುತ್ತಮ 25 ಚಿತ್ರಗಳನ್ನು ಮತದಾನ ಜಾಗೃತಿ, ಪ್ರಚಾರಕ್ಕಾಗಿ ಬಳಸಿಕೊಳ್ಳಲಾಗುತ್ತದೆ ಹಾಗೂ ಆ ವ್ಯಂಗ್ಯಚಿತ್ರಗಳಿಗೆ ಗೌರವಧನವನ್ನು ಸಹ ನೀಡಲಾಗುತ್ತದೆ.

**ಷರತ್ತು ಹಾಗು ನಿಬಂಧನೆಗಳು**

- ಚಿತ್ರಗಳಲ್ಲಿ ಯಾವುದೇ ರಾಜಕೀಯ ಪಕ್ಷಗಳ ಪ್ರಚಾರ ಮತ್ತು ವ್ಯಂಗ್ಯ ಇರಬಾರದು
- ಚಿತ್ರಗಳು ಹೊಸದಾಗಿದ್ದು, ಈ ಹಿಂದೆ ಯಾವುದೇ ಪ್ರಚಾರದಲ್ಲಿ ಬಳಸಿಕೊಂಡಿರಬಾರದು.
- ಚಿತ್ರಗಳು ಸ್ವಂತ ರಚನೆಯಲ್ಲಿರಬೇಕು. (ಗ್ರಾಫಿಕ್ಸ್, ಕುಂಚ, ಪೆನ್ಸಿಲ್, ಪೆನ್ ಇತ್ಯಾದಿ) ಚಿತ್ರಗಳನ್ನು 1800*2400 ಅಳತೆಯ ಡಿಜಿಟಲ್ ಆವೃತ್ತಿಯಲ್ಲಿ ಸಲ್ಲಿಸಬೇಕು.
- ಆಯ್ಕೆಯಾದ ಚಿತ್ರಗಳ ಅಸಲಿ ಪ್ರತಿಗಳನ್ನು ಚುನಾವಣಾ ಆಯೋಗಕ್ಕೆ ಸಲ್ಲಿಸಬೇಕು. ಆಯ್ಕೆಯಾದ ಮೊದಲ 25 ಚಿತ್ರಗಳಿಗೆ ಗೌರವಧನ ನೀಡಲಾಗುವುದು.
- ಚಿತ್ರಗಳನ್ನು mediacellceokarnataka@gmail.com ವಿಳಾಸಕ್ಕೆ ಕಳುಹಿಸ ಬೇಕು ಹಾಗೂ ಇಮೇಲ್ನಲ್ಲಿ ತಮ್ಮ ಹೆಸರು, ವಿಳಾಸ ಹಾಗೂ ಮೊಬೈಲ್ ಸಂಖ್ಯೆಯನ್ನು ತಪ್ಪದೇ ನಮೂದಿಸಿರಬೇಕು.
- ಚಿತ್ರಗಳನ್ನು ಕಳುಹಿಸಲು ಕೊನೆಯ ದಿನಾಂಕ 19–01–2024 ಸಂಜೆ 5:00 ಗಂಟೆಯ ಒಳಗಾಗಿ
- ಚಿತ್ರಗಳನ್ನು ಆಯ್ಕೆ ಮಾಡುವ ಹಾಗೂ ತಿರಸ್ಕರಿಸುವ ಅಧಿಕಾರ ಮುಖ್ಯ ಚುನಾವಣಾಧಿಕಾರಿ ಕರ್ನಾಟಕ, ಇವರಿಗೆ ಇರುತ್ತದೆ.
- ಸ್ಥಳದಲ್ಲೇ ಚಿತ್ರ ರಚನೆ ಮಾಡುವ ಕಲಾವಿದರು ದಿನಾಂಕ 21–01–2024 ರಂದು ಬೆಳಗ್ಗೆ 9:00 ಗಂಟೆಗೆ ಹಾಜರಿರಬೇಕು.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ: ಮಾಧ್ಯಮ ಘಟಕ, ಮುಖ್ಯ ಚುನಾವಣಾಧಿಕಾರಿಗಳ ಕಚೇರಿ, ಶೇಷಾದ್ರಿ ರಸ್ತೆ, ಬೆಂಗಳೂರು. ದೂರವಾಣಿ: 9480841211.

## ಜಿಲ್ಲಾ ಗೃಹರಕ್ಷಕದಳದ ಗೌರವ ಸಮಾದೇಷ್ಟರ ಹುದ್ದೆ ಭರ್ತಿ: ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಗೃಹರಕ್ಷಕದಳದ ಗೌರವ ಸಮಾದೇಷ್ಟರ ಹುದ್ದೆ ಖಾಲಿ ಇದ್ದು, ತುರ್ತಾಗಿ ಸರ್ಕಾರದ ಮಟ್ಟದಲ್ಲಿ ಆಯ್ಕೆಮಾಡಿ, ಅರ್ಹತೆ ಆಧಾರದ ಮೇಲೆ ಭರ್ತಿ ಮಾಡಬೇಕಾಗಿರುವುದರಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸಮಾದೇಷ್ಟರ ನೇಮಕಾತಿಗಾಗಿ ಹೊಸದಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಬೇಕಾಗಿರುವುದರಿಂದ ಜಿಲ್ಲಾ ಸಮಾದೇಷ್ಟರ ಹುದ್ದೆಯನ್ನು ಕರ್ನಾಟಕ ಗೃಹರಕ್ಷಕ ನಿಯಮಗಳು, 1963 ರ ನಿಯಮ 3–ಬಿ ಅನ್ವಯ ನಿಯಮಾನುಸಾರ ಭರ್ತಿ ಮಾಡಲಾಗುವುದು. ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಮೂನೆಯನ್ನು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪಡೆದುಕೊಳ್ಳಬಹುದಾಗಿದೆ. ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ಜನವರಿ 30, 2024ರ ಒಳಗಾಗಿ "ಜಿಲ್ಲಾಧಿಕಾರಿಗಳು, ಬೆಳಗಾವಿ" ಇವರಿಗೆ ಸಲ್ಲಿಸಬೇಕು ಎಂದು ಆರಕ್ಷಕ ಮಹಾ ನಿರ್ದೇಶಕರು, ಗೃಹರಕ್ಷಕದಳದ ಮಹಾ ಸಮಾದೇಷ್ಟರು ಮತ್ತು ಪೌರರಕ್ಷಣೆ ನಿರ್ದೇಶಕರಾದ ಅಕ್ಷಯ ಎಂ. ಹಾಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 20 ರಂದು "ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆ"

ಬೆಳಗಾವಿ: ಬೆಳಗಾವಿಯ ಕೆ.ಇ.ಆರ್.ಸಿ ಹಾಗೂ ಹೆಸ್ಕಾಂ ನಿಗಮ ಕಛೇರಿಯರವರ ನಿರ್ದೇಶನಗಳ ಮೇರೆಗೆ ಕಾಪಾ, ನಗರ ಉಪವಿಭಾಗ–03, ಹುವಿಸಕಂನಿ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್), ರವರ ಅಧ್ಯಕ್ಷತೆಯಲ್ಲಿ ನಗರದ ಕಾರ್ಯ ಮತ್ತು ಪಾಲನೆ, ನಗರ ಉಪ ವಿಭಾಗ ನಂ–3 ರ ಕಛೇರಿಯಲ್ಲಿ ಶನಿವಾರ (ಜ.20) 2024 ರಂದು ಬೆಳಗ್ಗೆ 10:30 ಘಂಟೆಗೆ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆ' ಆಯೋಜಿಸಲಾಗಿದೆ. ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆ ಕುಂದು ಕೊರತೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ ಎಂದು ಹುವಿಸಕಂನಿಂ ಬೆಳಗಾವಿಯ ಕಾಪಾ ನಗರ ಉಪ ವಿಭಾಗ ನಂ–3, ಸಹಾಯಕ ಕಾರ್ಯನಿರ್ವಾಹಕ ಇಂಜನೀಯರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರಕಾರಿ ನೌಕರರ ಸಹಕಾರಿ ಗೃಹ ನಿರ್ಮಾಣ ಸಂಘದ ಪದಾಧಿಕಾರಿಗಳ ಆಯ್ಕೆ

ಬೆಳಗಾವಿ: ಇತ್ತೀಚೆಗೆ ಜರುಗಿದ ವೈಭವ ನಗರ/ಬಸವ ಕಾಲನಿ/ ಹನುಮಾನ ನಗರ ಬೆಳಗಾವಿಯಲ್ಲಿಯ ಸರಕಾರಿ ನೌಕರರ ಸಹಕಾರಿ ಗ್ರಹ ನಿರ್ಮಾಣ ಸಂಘ ನಿಯಮಿತ ಇದರ ಪದಾಧಿಕಾರಿಗಳ ಚುನಾವಣೆಯಲ್ಲಿ ಶ್ರೀ ಡಿ ಎಸ್ ಕಿಣಗಿ ಅಧ್ಯಕ್ಷರು ಹಾಗೂ ಶ್ರೀ ರವಿ ಎಸ್ ಸಿ ಕೋಟಾರಗಸ್ತಿ ಉಪಾಧ್ಯಕ್ಷರೆಂದು ವಿರೋಧವಾಗಿ ಆಯ್ಕೆಯಾಗಿದ್ದಾರೆ. ಸಂಘದ ಇತರ ನಿರ್ದೇಶಕರುಗಳಾದ ಶ್ರೀ ಜಿ.ಎ. ಅಳಗುಂಡಗಿ, ಶ್ರೀ ಬಿ.ಎಸ್.ನಿಂಬಾಳ, ಶ್ರೀ ಎಮ್.ಎಚ್. ಮುಲ್ಲಾ, ಪಿ.ಪಿ.ಬಡಿಗೇರ, ಆರ್.ಎಸ್.ಮೇತ್ರಿ, ಎಸ್.ಜಿ ವೈದ್ಯ, ಎಮ್ .ಎಸ್.ಪಾಟೀಲ, ಎಸ್.ಜಿ.ನಾಗನೂರಿ, ಶ್ರೀ ಎಸ್ ಎಸ್ ಚರಂತಿಮಠ, ಶ್ರೀಮತಿ ರಂಜನಾ ಎಸ್ ಪಾಟೀಲ ಮತ್ತು ಶ್ರೀಮತಿ ಪಿ ಎಸ್ ಬಡಿಗೇರ ಇವರುಗಳು ಸಹ ಮುಂದಿನ 5 ವರ್ಷಗಳ ಅವಧಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ–ತರಬೇತಿ ಕಾರ್ಯಾಗಾರ

ಶಿವಮೊಗ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಶಿವಮೊಗ್ಗ ಜಿಲ್ಲೆ ಹಾಗೂ ದಿ ಶಿವಮೊಗ್ಗ ಮಲ್ಟಿಪರ್ಪಸ್ ಸೋಶಿಯಲ್ ಸರ್ವಿಸ್ ಸೊಸೈಟಿ, ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಜ.19 ಮತ್ತು 20 ರಂದು ಬೆಳಿಗ್ಗೆ 10 ರಿಂದ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ–2005 ರ ಅನುಷ್ಟಾನದಲ್ಲಿ ಭಾಗಿದಾರ ಇಲಾಖೆಗಳ ಪಾತ್ರದ ಕುರಿತಂತೆ ಎರಡು ದಿನಗಳ ಜಿಲ್ಲಾ ಮಟ್ಟದ ಓರಿಯಂಟೇಷನ್ ತರಬೇತಿ ಕಾರ್ಯವನ್ನು ಚೈತನ್ಯ, ಆಲ್ಕೊಳ ಇಲ್ಲಿ ಆಯೋಜಿಸಲಾಗಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎನ್.ಚಂದನ್ ಕಾರ್ಯಕ್ರಮ ಉದ್ಘಾಟಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಉಪನಿರ್ದೇಶಕ ಬಿ.ಹೆಚ್.ಕೃಷ್ಣಪ್ಪ ಅಧ್ಯಕ್ಷತೆ ವಹಿಸುವರು. ಎಸ್ಎಂಎಸ್ಎಸ್ ನಿರ್ದೇಶಕ ಫಾದರ್ ಕ್ಲಿಫರ್ಡ್ ರೋಶನ್ ಪಿಂಟೊ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಡಾ.ಸಂತೋಷಕುಮಾರ್ ಹೆಚ್, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಅಧಿಕಾರಿ ಚಂದ್ರಪ್ಪ ಎನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರೆಂದು ಪ್ರಕಟಣೆ ತಿಳಿಸಿದೆ.

# ಗ್ಯಾಂಗ್ ರೇಪ್ ಪ್ರಕರಣ: ಎಸ್ ಐಟಿ ತನಿಖೆಗೆ ಆಗ್ರಹಿಸಿ ಜ.20ರಂದು ಹಾವೇರಿಯಲ್ಲಿ ಬೃಹತ್ ಪ್ರತಿಭಟನೆ; ಬೊಮ್ಮಾಯಿ

ಬೆಂಗಳೂರು: ಹಾವೇರಿ ಜಿಲ್ಲೆ ಹಾನಗಲ್ ನಲ್ಲಿ ನಡೆದ ಗ್ಯಾಂಗ್ ರೇಪ್ ಪ್ರಕರಣವನ್ನು ಎಸ್ ಐಟಿ ತನಿಖೆಗೆ ವಹಿಸುವಂತೆ ಒತ್ತಾಯಿಸಿ ಜನವರಿ 20 ಹಾವೇರಿ ಎಸ್ಪಿ ಕಚೇರಿ ಎದುರು ಬಿಜೆಪಿಯಿಂದ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾವೇರಿಯಲ್ಲಿ ನೈತಿಕ ಪೊಲೀಸ್ ಗಿರಿ ಮಾಡಿ ಗ್ಯಾಂಗ್ ರೇಪ್ ಮಾಡಿರುವ ಪ್ರಕರಣವನ್ನು ಪೊಲೀಸರು ಮುಚ್ಚಿ ಹಾಕುವ ಯತ್ನ ಮಾಡಿದ್ದರು.

ಹಾವೇರಿ ಎಸ್ಪಿ, ಗೃಹ ಸಚಿವರು ಅದನ್ನು ಒಪ್ಪಿಕೊಳ್ಳಲು ಸಿದ್ದರಿರಲಿಲ್ಲ. ಅಲ್ಲದೇ, ಈಗ ಹಾನಗಲ್ ಪೊಲಿಸರನ್ನು ಅವರೇ ಅಮಾನತು ಮಾಡಿದ್ದಾರೆ. ಹೀಗಾಗಿ ಪೊಲಿಸರಿಂದ ಲೋಪವಾಗಿರುವುದನ್ನು ಒಪ್ಪಿಕೊಂಡಂತಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯಲ್ಲಿ ಕಾಪಾಡುವಲ್ಲಿ ರಾಜಕಾರಣ ಬಹಳ ಪಾತ್ರ ವಹಿಸುತ್ತಿದೆ. ಹಾನಗಲ್ ಪೊಲಿಸರು ಕಾನೂನು ಪ್ರಕಾರ ನಡೆದುಕೊಂಡಿಲ್ಲ. ಆ ಹೆಣ್ಣು ಮಗಳಿಗೆ ಸರಿಯಾದ ಚಿಕಿತ್ಸೆ ನೀಡುತ್ತಿಲ್ಲ. ಈ ಬಗ್ಗೆ ಸಿಎಂ ಕೂಡ ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಹೀಗಾಗಿ ಎಸ್ ಐಟಿ ತನಿಖೆ ನಡೆಸುವಂತೆ ಆಗ್ರಹಿಸಿ ಜನವರಿ 20 ರಂದು ಹಾವೇರಿ ಎಸ್ಪಿ ಕಚೇರಿ ಎದುರು ಪ್ರತಿಭಟನೆ ಮಾಡಲು ತೀರ್ಮಾನ ಮಾಡಿದ್ದೇವೆ.

ಪ್ರತಿಭಟನೆಯಲ್ಲಿ ವಿಪಕ್ಷ ನಾಯಕ ಆರ್. ಅಶೋಕ್ ಸೇರಿದಂತೆ ಅನೇಕ ನಾಯಕರು



ಹಾಗೂ ಜಿಲ್ಲಾ ಮುಖಂಡರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಸಿಎಂಗೆ ಮೋದಿ ಫೋಬಿಯಾ: ಸಿಎಂ ಸಿದ್ದರಾಮಯ್ಯ ಅವರಿಗೆ ಮೋದಿ ಫೋಬಿಯಾ ಇದೆ. ಇಡಿ ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ದಕ್ಷ ಆಡಳಿತ ನೀಡುತ್ತಿದ್ದಾರೆ. ಎಲ್ಲ ರೀತಿಯ ಅಭಿವೃದ್ಧಿ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಮತ್ತೆ ಮೂರನೇ ಬಾರಿಗೆ ಪ್ರಧಾನಿ ಆಗಲಿದ್ದಾರೆ. ಹೀಗಾಗಿ ಅದನ್ನು ಸಹಿಸಿಕೊಳ್ಳಲಾಗದೇ ಸಿದ್ದರಾಮಯ್ಯ ಅವರ ವಿರುದ್ದ ಅನಗತ್ಯ ಆರೋಪ ಮಾಡುತ್ತಾರೆ ಎಂದು ಟೀಕಿಸಿದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಹೆಚ್ಚು ಸೀಟು ಬಂದರೆ ಸಿದ್ದರಾಮಯ್ಯ ಸಿಎಂ ಆಗಿ ಮುಂದುವರೆಯುತ್ತಾರೆ ಅಂತ ಸಿಎಂ ಪುತ್ರ ಯತೀಂದ್ರ ಹೇಳಿದ್ದಾರೆ. ಕಡಿಮೆ ಸೀಟು ಬಂದರೆ ಸಿಎಂ ಸ್ಥಾನ ಹೋಗುವ ಆತಂಕ ಅವರಿಗೆ ಕಾಡುತ್ತಿದೆ. ಅದಕ್ಕಾಗಿ ರಾಜ್ಯಕ್ಕೆ ಮೋದಿ ಬಂದಾಗೊಮ್ಮೆ ಸುಳ್ಳು ದಾಖಲೆಗಳನ್ನು ನೀಡಿ ಜನರ ದಾರಿ ತಪ್ಪಿಸಿದ್ದಾರೆ. 5 ನೇ ಹಣಕಾಸು ಆಯೋಗದಲ್ಲಿ ರಾಜ್ಯದ ಅನುದಾನ ಶೇ 4.7 ನಿಂದ ಶೇ 3.6 ಗೆ ಇಳಿಯಲು ಸಿದ್ದರಾಮಯ್ಯ ಅವರೇ ಕಾರಣ ಅವರು ಸರಿಯಾಗಿ ರಾಜ್ಯದ ವಸ್ತು ಸ್ಥಿತಿ ಬಗ್ಗೆ ಮಾಹಿತಿ ನೀಡಿಲ್ಲ ಎಂದು ವಾಗ್ದಾಳಿ ನಡೆಸಿದರು.

ಸಂಸದ ಅನಂತಕುಮಾರ್ ಹೆಗಡೆ ಅವರ ಮಾತಿನ ಕುರಿತು ಪ್ರತಿಕ್ರಿಯಿಸಿದ ಬೊಮ್ಮಾಯಿ, ಯಾರೂ ಅವರನ್ನು ಸಮರ್ಥನೆ ಮಾಡಿಕೊಳ್ಳುತ್ತಿಲ್ಲ. ಯಾರ ಬಗ್ಗೆ ಮಾತನಾಡುವಾಗ ಎಚ್ಚರಿಕೆಯಿಂದ ಮಾತನಾಡಬೇಕು. ಸಿಎಂ ಸಿದ್ದರಾಮಯ್ಯ ಅವರು ಭೂಮಿ ಮೇಲೆ ಇರುವ ಎಲ್ಲರ ಬಗ್ಗೆಯೂ ಏಕ ವಚನದಲ್ಲಿ ಮಾತನಾಡುತ್ತಾರೆ. ಆದರೆ, ಅವರ ಬಗ್ಗೆ ಬೇರೆಯವರು ಮಾತನಾಡಿದರೆ ಅದು ತಪ್ಪು ಎನ್ನುತ್ತಾರೆ. ಅದೇ ಈಗ ಪ್ರಶ್ನೆಯಾಗಿದೆ ಎಂದು ಹೇಳಿದರು.

## ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಪ್ರವಾಸ ಕಾರ್ಯಕ್ರಮ



ಬಳ್ಳಾರಿ: ಯುವಜನ ಸಬಲೀಕರಣ, ಕ್ರೀಡೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಅವರು, ಜಿಲ್ಲೆಯಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲು ಜ.19 ರಂದು ಜಿಲ್ಲಾ ಪ್ರವಾಸ ಕೈಗೊಳ್ಳುವರು.

ಜ.18 ರಂದು ಸಂಜೆ 05.30 ಕ್ಕೆ ಬೆಂಗಳೂರಿನಿಂದ ಹೊರಟು ಚಿಕ್ಕಬಳ್ಳಾಪುರ ರಸ್ತೆ ಮಾರ್ಗವಾಗಿ ಅನಂತಪುರ ಜಿಲ್ಲೆಯ ಮೂಲಕ ಚೆಳ್ಳಗುರ್ಕಿಯಿಂದ ರಾತ್ರಿ 10.30 ಕ್ಕೆ ಬಳ್ಳಾರಿಗೆ ಆಗಮಿಸಿ ವಾಸ್ತವ್ಯ ಮಾಡುವರು.

ಜ.19 ರಂದು ಬೆಳಿಗ್ಗೆ 09 ಗಂಟೆಗೆ ತಂಬ್ರಹಳ್ಳಿಯ ಮುದಿ ಮಲ್ಲೇಶ್ವರ ದೇವಸ್ಥಾನಕ್ಕೆ ಭೇಟಿ ನೀಡುವರು. ಬೆಳಿಗ್ಗೆ 09.30 ರಿಂದ 10.15 ರ ವರೆಗೆ ದಾಸರನಾಗೇನಹಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸುವರು.

ಬಳಿಕ ಬೆಳಿಗ್ಗೆ 10.15 ರಿಂದ 11 ಗಂಟೆಯವರೆಗೆ ತಂಬ್ರಹಳ್ಳಿ ಗ್ರಾಮದ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಮಾಡುವರು. ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 12.30 ರ ವರೆಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಬಿಡಿಎಎ ಫುಟ್ಬಾಲ್ ಮೈದಾನದ ಸಭಾಂಗಣದಲ್ಲಿ ಏರ್ಪಡಿಸಲಾದ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ನಂತರದಲ್ಲಿ ಮಧ್ಯಾಹ್ನ 01 ಗಂಟೆಯಿಂದ 02 ಗಂಟೆಯವರೆಗೆ ಬ್ಯಾಲಚಿಂತೆ ಗ್ರಾಮದಲ್ಲಿ ದ್ವಾರಬಾಗಿಲು ಪೂಜಾ ಕಾರ್ಯಕ್ರಮ ಹಾಗೂ ಸಾರ್ವಜನಿಕರ ಭೇಟಿ ಮಾಡುವರು. ಮಧ್ಯಾಹ್ನ 03 ಗಂಟೆಯಿಂದ ಸಂಜೆ 04 ಗಂಟೆಯವರೆಗೆ ಗೊಲ್ಲರ ನಾಗೇನಹಳ್ಳಿ ಗ್ರಾಮದಲ್ಲಿ ಸಾರ್ವಜನಿಕರ ಭೇಟಿ ಹಾಗೂ ಅಹವಾಲು ಸ್ವೀಕಾರ ಮಾಡುವರು.

ಸಂಜೆ 04.30 ರಿಂದ 06.30 ರ ವರೆಗೆ ಕಾರೇಕಲ್ಲು ಗ್ರಾಮದಲ್ಲಿ ಸಾರ್ವಜನಿಕರ ಭೇಟಿ ಹಾಗೂ ಅಹವಾಲು ಸ್ವೀಕಾರ ಮಾಡುವರು. ನಂತರ ಸಂಜೆ 07.30 ಕ್ಕೆ ಬಳ್ಳಾರಿಗೆ ಆಗಮಿಸಿ ವಾಸ್ತವ್ಯ ಮಾಡುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ಅವರು ತಿಳಿಸಿದ್ದಾರೆ.

## ಎಸ್‌ಸಿ ಒಳ ಮೀಸಲಾತಿ ಜಾರಿ ಕುರಿತು ಕೇಂದ್ರಕ್ಕೆ ಶಿಫಾರಸು ಮಾಡಲು ಸಚಿವ ಸಂಪುಟ ಅಸ್ತು



ಬೆಂಗಳೂರು: ಪರಿಶಿಷ್ಟ ಜಾತಿಗೆ(ಎಸ್‌ಸಿ) ಒಳ ಮೀಸಲಾತಿ ಕಲ್ಪಿಸುವ ನ್ಯಾ.ಸದಾಶಿವ ಆಯೋಗದ ವರದಿ ಜಾರಿಗೆ ರಾಜ್ಯ ಸರ್ಕಾರ ಮುಂದಾಗಿದ್ದು, ಈ ಕುರಿತು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲು ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಪರಿಶಿಷ್ಟ ಜಾತಿಯಲ್ಲಿರುವ ವಿವಿಧ ಸಮುದಾಗಳಿಗೆ ಒಳ ಮೀಸಲಾತಿ ಕಲ್ಪಿಸಲು ಸಂವಿಧಾನಕ್ಕೆ ತಿದ್ದುಪಡಿ ತರುವಂತೆ ಕೇಂದ್ರಕ್ಕೆ ಶಿಫಾರಸು ಮಾಡಲು ಒಪ್ಪಿಗೆ ಸೂಚಿಸಲಾಗಿದೆ.

ಸಂಪುಟ ಸಭೆ ಬಳಿಕ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರಾದ ಎಚ್ಕೆ ಪಾಟೀಲ್ ಹಾಗೂ ಎಚ್ಸಿ ಮಹಾದೇವಪ್ಪ ಅವರು, ಪರಿಶಿಷ್ಟ ಜಾತಿಗೆ ಒಳ ಮೀಸಲಾತಿ ಕಲ್ಪಿಸುವ ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿ ಬಗ್ಗೆ ವಿವರಿಸಿದರು.

ವರದಿ ಕುರಿತು ಸಂಪುಟ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆದಿದ್ದು, ಹೊಸ ಜನಗಣತಿ ಪ್ರಕಾರ ಮೀಸಲಾತಿ ಪರಿಷ್ಕರಿಸಲು ಸಂವಿಧಾನಬದ್ಧವಾಗಿ ರಾಜ್ಯಗಳಿಗೆ ಅಧಿಕಾರ ನೀಡುವಂತೆ ಮತ್ತು ಒಳ ಮೀಸಲಾತಿಗಾಗಿ ಸಂವಿಧಾನದ ಅನುಚ್ಛೇದ 341ಕ್ಕೆ ತಿದ್ದುಪಡಿ ತರುವಂತೆ ಕೇಂದ್ರಕ್ಕೆ ಶಿಫಾರಸು ಮಾಡಲು ನಿರ್ಧರಿಸಲಾಗಿದೆ ಎಂದರು.

ಇದರೊಂದಿಗೆ ಒಳ ಮೀಸಲಾತಿ ವಿವಾದ ಈಗ ಕೇಂದ್ರ ಸರ್ಕಾರದ ಅಂಗಳ ತಲುಪಿದೆ. ಈ ಹಿಂದೆ ಬಿಜೆಪಿ ಸರ್ಕಾರ ವರ್ಗೀಕರಣ ಮಾಡಿ ಆದೇಶ ಹೊರಡಿಸಿತ್ತು. ಆದರೆ ಇದನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್ ನಲ್ಲಿ ಅರ್ಜಿ ಸಲ್ಲಿಸಲಾಗಿದ್ದು, ಈ ವಿಚಾರ ಸುಪ್ರೀಂನಲ್ಲಿ ವಿಚಾರಣೆ ನಡೆಯುತ್ತಿದೆ. ಈಗ ಸಿದ್ದರಾಮಯ್ಯನವರ ಸರ್ಕಾರ ಕಾನೂನು ತಿದ್ದುಪಡಿ ಮಾಡಲು ಕೇಂದ್ರಕ್ಕೆ ಶಿಫಾರಸು ಮಾಡಿ ಕೈತೊಳೆದುಕೊಂಡಿದೆ.

# ಶ್ರೀರಂಗಪಟ್ಟಣ ಜುಮ್ಮಾ ಮಸೀದಿಯಲ್ಲಿ ಮದರಸಾ: ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್

ಮಂಡ್ಯ: ಶ್ರೀರಂಗಪಟ್ಟಣ ತಾಲೂಕಿನ ಐತಿಹಾಸಿಕ ಜುಮ್ಮಾ ಮಸೀದಿಯ ಆವರಣದಲ್ಲಿ ಅಕ್ರಮವಾಗಿ ಮದರಸಾ ನಡೆಸುತ್ತಿರುವುದನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಗೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಗೆ ನೋಟಿಸ್ ಜಾರಿ ಮಾಡಿದೆ.

ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಾಲಚಂದ್ರ ವರಾಳೆ ಮತ್ತು ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಅವರ ನೇತೃತ್ವದ ವಿಭಾಗೀಯ ಪೀಠವು ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕಿನ ಹೊಸ ಕಬ್ಬಾಳು ಗ್ರಾಮದ ಅಭಿಷೇಕ್ ಗೌಡ ಅವರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿತು.

ಪೀಠವು ಭಾರತ ಸರ್ಕಾರದ ಸಂಸ್ಕೃತಿ ಸಚಿವಾಲಯ, ಭಾರತೀಯ ಪುರಾತತ್ವ ಸರ್ವೇಕ್ಷಣೆಯ ಮಹಾನಿರ್ದೇಶಕರು (ಎಎಸ್ಐ), ಕರ್ನಾಟಕ ಸರ್ಕಾರದ ಕಂದಾಯ ಇಲಾಖೆ ಮತ್ತು ಕರ್ನಾಟಕದ ಮಂಡ್ಯ ಜಿಲ್ಲಾಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಿದೆ.

ಶ್ರೀರಂಗಪಟ್ಟಣವು ಐತಿಹಾಸಿಕ ಮತ್ತು ಪ್ರವಾಸಿ ತಾಣವಾಗಿದ್ದು, ಟಿಪ್ಪು ಸುಲ್ತಾನ್ ಆಳ್ವಿಕೆಯಲ್ಲಿ ನಿರ್ಮಿಸಲಾದ ಶ್ರೀರಂಗಪಟ್ಟಣದ ಜುಮ್ಮಾ ಮಸೀದಿಯನ್ನು ಐತಿಹಾಸಿಕ ಮತ್ತು ಪುರಾತನ ಸ್ಮಾರಕವೆಂದು ಘೋಷಿಸಲಾಗಿದೆ,



ಇದನ್ನು ಎಎಸ್ಐ ರಕ್ಷಿಸಿದೆ ಎಂದು ಅರ್ಜಿದಾರರು ಹೇಳಿದ್ದಾರೆ.

ಆದರೆ, ಐತಿಹಾಸಿಕ ಮಸೀದಿಯ ಆವರಣದಲ್ಲಿ ಮದರಸಾ ಅಕ್ರಮವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಅರ್ಜಿದಾರರು ಆರೋಪಿಸಿದ್ದಾರೆ. ಅರ್ಜಿಯ ಪ್ರಕಾರ, ಅಲ್ಲಿ 50 ರಿಂದ 60 ಮಕ್ಕಳಿಗೆ ವಸತಿ ಮತ್ತು ಆಹಾರದ ವ್ಯವಸ್ಥೆ ಮಾಡಲಾಗಿದೆ.

ಇಲ್ಲಿನ ಮಕ್ಕಳನ್ನು ಪ್ರಾರ್ಥನೆಗೆ ಸಮೀಪದ ಮಸೀದಿಗೆ ಕರೆದೊಯ್ಯುವುದರಿಂದ ಕಾಂಪೌಂಡ್ ಕುಸಿದಿದೆ. ಇದಕ್ಕೆ ಬಾಗಿಲು ಅಳವಡಿಸಲಾಗಿದೆ.

ಹೆಚ್ಚುವರಿಯಾಗಿ, ಶೌಚಾಲಯಗಳು, ಸ್ನಾನಗೃಹಗಳು, ಅತಿಥಿ ಗೃಹ ಮತ್ತು ಅಡುಗೆಮನೆ ನಿರ್ಮಿಸಲಾಗಿದೆ ಮತ್ತು ಒದ್ದೆಯಾದ ಬಟ್ಟೆಗಳನ್ನು ಆವರಣದಲ್ಲಿ ಒಣಗಲು ಬಿಡಲಾಗಿದೆ.

ಈ ಚಟುವಟಿಕೆಗಳು 1958 ರ ಪ್ರಾಚೀನ ಸ್ಮಾರಕಗಳ ಸಂರಕ್ಷಣೆ ಕಾಯಿದೆಯ ಸೆಕ್ಷನ್ 7, 8 ಮತ್ತು 16ರ ನಿಯಮ ಉಲ್ಲಂಘಿಸುತ್ತದೆ ಎಂದು ಅರ್ಜಿದಾರರು ಪ್ರತಿಪಾದಿಸಿದ್ದಾರೆ.

ಈ ಉಲ್ಲಂಘನೆಗಳ ಬಗ್ಗೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಮತ್ತು ಎಎಸ್ಐಗೆ ತಿಳಿದಿದೆ ಎಂದು ಅರ್ಜಿದಾರರು ಹೇಳಿದ್ದಾರೆ. 2020ರ ಮೇ 20 ರಂದು ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಲಾಗಿದ್ದು, ಅತಿಕ್ರಮಣ ಮತ್ತು ಉಲ್ಲಂಘನೆಗಳನ್ನು ಪರಿಹರಿಸುವಂತೆ ಅಧಿಕಾರಿಗಳಿಗೆ ಒತ್ತಾಯಿಸಲಾಗಿದೆ. ಕೂಡಲೇ ಮದರಸಾವನ್ನು ಆವರಣದಿಂದ ಬಿಡುವಂತೆ ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಪುರಾತನ ಸ್ಮಾರಕವಾಗಿ ಮಸೀದಿಯನ್ನು ಸಂರಕ್ಷಿಸಬೇಕೆಂದು, ಈ ನಿಟ್ಟಿನಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಗೆ ನಿರ್ದೇಶನಗಳನ್ನು ನೀಡಬೇಕೆಂದು ಕೋರಿದ್ದಾರೆ.

## ಗಂಡ–ಹೆಂಡ್ತಿ ಜಗಳ ತಾರಕಕ್ಕೆ: ಪರಸ್ಪರ ಬೆಂಕಿ ಹಚ್ಚಿಕೊಂಡು ಇಬ್ಬರೂ ಸಾವು

ಚಿಕ್ಕಬಳ್ಳಾಪುರ: ನಿತ್ಯವೂ ಸಣ್ಣ ಸಣ್ಣ ಕಾರಣಕ್ಕೆ ಜಗಳವಾಡಿಕೊಂಡಿದ್ದ ದಂಪತಿ ನಡುವಿನ ವೈಮನಸ್ಸು ಅಂತಿಮವಾಗಿ ಇಬ್ಬರೂ ಪರಸ್ಪರ ಬೆಂಕಿ ಹಚ್ಚಿಕೊಂಡು ಸಾಯುವಲ್ಲಿಗೆ ಅಂತ್ಯಗೊಂಡಿದೆ.

ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ತಾಲೂಕಿನ ಗ್ರಾಮದಲ್ಲಿ ಈ ಘಟನೆ ನಡೆದಿದೆ.

ಬಾಗೇಪಲ್ಲಿ ತಾಲೂಕಿನ ಹಿಂದುಕೊರಳಪಲ್ಲಿ ಗ್ರಾಮದ ಮಂಜುನಾಥ್ ಹಾಗೂ ಪ್ರಮೀಳಾ ಮೃತ ದಂಪತಿ. ಅವರಿಬ್ಬರೂ ಸೀಮೆ ಎಣ್ಣೆ ಸುರಿದುಕೊಂಡು ಬೆಂಕಿ ಹಚ್ಚಿಕೊಂಡು ಸಾವು ತಂದುಕೊಂಡಿದ್ದಾರೆ.


ಕೌಟುಂಬಿಕ ಕಾರಣಗಳಿಗಾಗಿ ಜಗಳವಾಡುತ್ತಿದ್ದ ಅವರಿಬ್ಬರೂ ಪರಸ್ಪರ ಸೀಮೆ ಎಣ್ಣೆ ಎರಚಿಕೊಂಡಿದ್ದಾರೆ. ಕೊನೆಗೆ ಒಬ್ಬರು ಬೆಂಕಿ ಕೊಟ್ಟಿದ್ದಾರೆ. ಅದರಲ್ಲಿ ಇಬ್ಬರೂ ಸಿಲುಕಿ ಬೆಂದು ಹೋಗಿದ್ದಾರೆ. ಸುಟ್ಟ ಗಾಯಗಳಿಂದ ಗಂಭೀರ ಪರಿಸ್ಥಿತಿಯಲ್ಲಿದ್ದ ದಂಪತಿಯನ್ನು ಕೂಡಲೇ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಅವರು ಬದುಕುಳಿಯಲಿಲ್ಲ.

## ನೇಣು ಬಿಗಿದ ಸ್ಥಿತಿಯಲ್ಲಿ ನವ ವಿವಾಹಿತೆಯ ಶವ ಪತ್ತೆ

ಶಿವಮೊಗ್ಗ : ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನ ನಾಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ದಾಸನಕೊಡಿಗೆ ಗ್ರಾಮದಲ್ಲಿ ನವ ವಿವಾಹಿತೆ ನೇಣಿಗೆ ಶರಣಾಗಿರುವ ಘಟನೆ ನಡೆದಿದೆ.

ನೇಣಿಗೆ ಶರಣಾಗಿರುವ ನವ ವಿವಾಹಿತೆ ಶರ್ಮಿತಾ ಬಿ.ಯು. (24) ಎಂದು ತಿಳಿದುಬಂದಿದೆ.

ಬಿಜ್ಜಳ ಗ್ರಾಮದ ಶರ್ಮಿತಾ ಎಂಬ ಯುವತಿ 2023ರ ಮಾರ್ಚ್ ತಿಂಗಳಿನಲ್ಲಿ ದಾಸನಕೊಡಿಗೆ ಗ್ರಾಮದ ವಿದ್ಯಾರ್ಥ್ ಎಂಬ ಯುವಕನನ್ನು ಪ್ರೀತಿಸಿ ವಿವಾಹವಾಗಿದ್ದರು.



ಪತಿ ವಿದ್ಯಾರ್ಥ್ ಸೋಮೇಶ್ವರ ವನ್ಯಜೀವಿ ಅಭಯಾರಣ್ಯದಲ್ಲಿ ರಾತ್ರಿ ಪಾಳಿಯ ಕೆಲಕ್ಕೆ ಪತಿ ತೆರಳಿದ್ದ ಸಂದರ್ಭದಲ್ಲಿ ಶರ್ಮಿತಾ ನೇಣಿಗೆ ಶರಣಾಗಿದ್ದಾರೆಂದು ಹೇಳಲಾಗುತ್ತಿದೆ. ಪತಿಯ ಮನೆಯಲ್ಲಿ ಅತ್ತೆ, ಮಾವ ಇದ್ದರು.

ಎಂದಿನಂತೆ ಮನೆಯ ಉಪ್ಪರಿಗೆ ಕೊಠಡಿಗೆ ರಾತ್ರಿ ಮಲಗಲು ಶರ್ಮಿತಾ ತೆರಳಿದ್ದಾರೆ.

ಆದರೆ ಬೆಳಿಗ್ಗೆ ಬಾಗಿಲು ತೆರೆದಿರಲಿಲ್ಲ. ಹೀಗಾಗಿ ಅನುಮಾನದಿಂದ ಮನೆಯ ಕೆಲಸದವರು ಕಿಟಕಿಯಿಂದ ನೋಡಿದಾಗ ಶರ್ಮಿತಾ ನೇಣು ಬಿಗಿದ ಸ್ಥಿತಿಯಲ್ಲಿ ಕಂಡು ಬಂದಿದ್ದಾರೆ.

ಶರ್ಮಿತಾ ನೇಣು ಬಿಗಿದ ಸ್ಥಿತಿಯಲ್ಲಿರುವುದನ್ನು ಕಂಡು ತಕ್ಷಣ ಯುವತಿಯ ಪಾಲಕರಿಗೆ ವಿಷಯ ತಿಳಿಸಿದ್ದಾರೆ.

ಶರ್ಮಿತಾ ಪಾಲಕರು ಬಂದ ನಂತರ ಕೊಠಡಿಯ ಬಾಗಿಲು ಮುರಿದು ಒಳ ಪ್ರವೇಶಿಸಿದ್ದಾರೆ. ಮೃತದೇಹದ ಬಳಿ ಮರಣಪತ್ರ ಲಭ್ಯವಾಗಿದೆ. ಅನಾರೋಗ್ಯದ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇನೆ ಎಂದು ಬರೆಯಲಾಗಿದೆ ಎನ್ನಲಾಗಿದೆ.


ಜೆಸಿ ಆಸ್ಪತ್ರೆಯಲ್ಲಿ ಶವ ಪರೀಕ್ಷೆ ನಡೆಯಿತು. ತಹಶೀಲ್ದಾರ್ ಜಕ್ಕನಗೌಡರ್ ಇದ್ದರು. ಆಗುಂಬೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹಿಂದೂ ಮೆರವಣಿಗೆ ಮೇಲೆ ಎಂಜಲು ಉಗುಳಿದ್ದ ಮುಸ್ಲಿಂ ಯುವಕನ ಮನೆ ಕೆಡವಿದ ಸರ್ಕಾರ

ಮಧ್ಯಪ್ರದೇಶದ ಉಜ್ಜಯಿನಿಯಲ್ಲಿ ಬುಲ್ಡೋಜರ್ ಓಡಿಸಿ ವ್ಯಕ್ತಿಯೊಬ್ಬರ ಮನೆಯನ್ನು ಕೆಡವಲಾಗಿದೆ. ವಾಸ್ತವವಾಗಿ, ಬಾಬಾ ಮಹಾಕಾಲ್ ಮೆರವಣಿಗೆ ಮೇಲೆ 18 ವರ್ಷದ ಯುವಕ ಅದ್ನಾನ್ ಮನ್ಸೂರಿ ಮನೆಯ ಮೇಲೆ ನಿಂತು ಎಂಜಲು ಉಗುಳಿದ್ದ ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು.

ಈ ಪ್ರಕರಣ ಸಂಬಂಧ ಅದ್ನಾನ್ 151 ದಿನಗಳ ಕಾಲ ನ್ಯಾಯಾಂಗ ಬಂಧನದಲ್ಲಿರಬೇಕಾಯಿತು. ಇದೀಗ ಆತನ ಮನೆ ಅತಿಕ್ರಮಣದಿಂದಾಗಿ ನೆಲಸಮವಾಗಿದೆ. 5 ತಿಂಗಳು ಜೈಲಿನಲ್ಲಿದ್ದ ಬಳಿಕ ಯುವಕನಿಗೆ ಜಾಮೀನು ಸಿಕ್ಕಿದೆ. ಪ್ರತ್ಯಕ್ಷದರ್ಶಿ ಆತನನ್ನು ಗುರುತಿಸಲು ನಿರಾಕರಿಸಿದರು.

ಉಜ್ಜಯಿನಿಯಲ್ಲಿ ಜುಲೈ 17ರಂದು ಬಾಬಾ ಮಹಾಕಾಲ್ ಮೆರವಣಿಗೆ ನಡೆದಿತ್ತು. ಈ ಮೆರವಣಿಗೆ ಅದ್ನಾನ್ ಮನೆ ಮುಂದೆ ಹೋಗುತ್ತಿದ್ದಾಗ ಮನೆಯ ಮೇಲಿನಿಂದ ಯಾರೋ ಎಂಜಲು ಉಗುಳುತ್ತಿದ್ದಾರೆ ಎಂದು ಭಕ್ತರು ಆರೋಪಿಸಿದ್ದರು. ಈ ಸಂಬಧ ಮೂವರು ಬಾಲಕರನ್ನು ವಶಕ್ಕೆ ಪಡೆಯಲಾಗಿತ್ತು.



ಮೆರವಣಿಗೆ ಹೋಗುತ್ತಿದ್ದಾಗ ಅಶ್ರಫ್ ಹುಸೇನ್ ಅವರ ಇಬ್ಬರು ಮಕ್ಕಳು ಮತ್ತು ಇತರರು ಭಕ್ತರ ಮೇಲೆ ಛಾವಣಿಯಿಂದ ಉಗುಳಿದ್ದಾರೆ ಎಂದು ಸಾವನ್ ಲೋಟ್ ಎಂಬ ವ್ಯಕ್ತಿ ಆರೋಪಿಸಿದ್ದರು. ವಿಷಯ ಸೂಕ್ಷ್ಮವಾಗಿದ್ದು, ಪೊಲೀಸರು ಇಬ್ಬರು ಅಪ್ರಾಪ್ತರು ಸೇರಿದಂತೆ ಮೂವರು ಮಕ್ಕಳ ವಿರುದ್ಧ 5 ಸೆಕ್ಷನ್‌ಗಳ ಅಡಿಯಲ್ಲಿ ಎಫ್ಐಆರ್ ದಾಖಲಿಸಿದ್ದರು.

ಕಳೆದ ಸೋಮವಾರ ಇಂದೋರ್‌ನ ಮಧ್ಯಪ್ರದೇಶ ಹೈಕೋರ್ಟ್‌ನ ಏಕಸದಸ್ಯ ಪೀಠವು ಅದ್ನಾನ್‌ಗೆ ಜಾಮೀನು ನೀಡಿತು. ನ್ಯಾಯಾಧೀಶರು ತಮ್ಮ ಎರಡು ಪುಟಗಳ ಆದೇಶದಲ್ಲಿ, ಪ್ರಾಸಿಕ್ಯೂಷನ್ ಸಾಕ್ಷಿ ನಂ. 1 ಆಗಿರುವ ದೂರುದಾರ ಸಾವನ್ ಲೋಟ್ ಮತ್ತು ಸಾಕ್ಷಿ ನಂ. 2, ಅಜಯ್ ಖತ್ರಾ ಅವರು ವಿಚಾರಣಾ ನ್ಯಾಯಾಲಯದ ಮುಂದೆ ತಮ್ಮ ಪ್ರತಿಕೂಲ ಹೇಳಿಕೆ ನೀಡಿದ್ದಾರೆ. ಅಲ್ಲದೆ ಪ್ರಾಸಿಕ್ಯೂಷನ್ ಸಹ ಪ್ರಕರಣವನ್ನು ಬೆಂಬಲಿಸುವುದಿಲ್ಲ ಎಂದು ಹೇಳಿದೆ. ಹೀಗಾಗಿ ಆತನಿಗೆ ಜಾಮೀನು ನೀಡಲಾಗಿತ್ತು.

ಅದ್ನಾನ್ ಜಾಮೀನು ಪಡೆದ ನಂತರ, ಉಜ್ಜಯಿನಿಯ ಖಾರಾ ಕುವಾನ್ ಪೊಲೀಸ್ ಠಾಣೆಯ ಪೊಲೀಸರು ಏನನ್ನೂ ಹೇಳದೆ ಸ್ಪಷ್ಟವಾಗಿ ತಪ್ಪಿಸಿಕೊಳ್ಳುತ್ತಿದ್ದಾರೆ. ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಲಿವನ್ ಕುಜೂರ್ ಅವರು ಜಾಮೀನು ನೀಡಿದ ಕಾರಣ ನ್ಯಾಯಾಲಯದ ವಿಷಯವಾಗಿದೆ ಎಂದು ಹೇಳುತ್ತಾರೆ. ಬಾಬಾ ಮಹಾಕಾಲ್ ಮೆರವಣಿಗೆ ಮೇಲೆ ಉಗುಳಿರುವ ಘಟನೆ ನಡೆದಿದೆ ಎಂಬುದಷ್ಟೇ ನಮಗೆ ಮಾಹಿತಿ. ಸದ್ಯ ಪ್ರಕರಣ ನಡೆಯುತ್ತಿದ್ದು, ಈ ವಿಚಾರದಲ್ಲಿ ಏನನ್ನೂ ಹೇಳಲಾರೆ ಎಂದರು.

**ಪುರಸಭೆ ಕಾರ್ಯಾಲಯ, ಉಗಾರಖುರ್ದ.**

**ಕ್ರ.ಸಂ:ಪು.ಸ.ಉ/15ನೇ.ಹ/ಎಸ್,ಎಫ್.ಸಿ/2023–24 ದಿನಾಂಕ:17/01/2024**

**ಟೆಂಡರ ಪ್ರಕಟಣೆ**

ಪುರಸಭೆ ಉಗಾರಖುರ್ದ ಕಾರ್ಯಾಲಯದಿಂದ ಸನ್ 2023–24ನೇ ಸಾಲಿನ ಎಸ್,ಎಫ್.ಸಿ. ಮುಕ್ತನಿಧಿ ಅನುದಾನ, ಹಾಗೂ ಸನ್ 2023–24ನೇ ಸಾಲಿನ 15ನೇ ಹಣಕಾಸು ಅನುದಾನದ ಯೋಜನೆಯಡಿ ಈ ಕೆಳಕಂಡ ಕಾಮಗಾರಿಗಳಿಗೆ KW-1 & KW-2 ಮಾದರಿಯಲ್ಲಿ ಅರ್ಹ ಸಿವ್ಹಿಲ್ ಗುತ್ತಿಗೆದಾರರಿಂದ ಟೆಂಡರಗಳನ್ನು ಆಹ್ವಾನಿಸಲಾಗಿದೆ. ಕಾಮಗಾರಿಗಳ ಮೊತ್ತ ರೂ.5.05 ರಿಂದ ರೂ.20.58 ಲಕ್ಷಗಳ ವರೆಗಿನ ಕಾಮಗಾರಿಗಳಿದ್ದು, ಇಂಡೆಂಟ್ ಸಂಖ್ಯೆ 9901/call-02, 9915/call-02 ಕಾಮಗಾರಿಗಳಿಗೆ ಅರ್ಹ ಎಸ್.ಸಿ ಸಿವ್ಹಿಲ್ ಗುತ್ತಿಗೆದಾರರಿಂದ, ಇಂಡೆಂಟ್ ಸಂಖ್ಯೆ 9906/call-02 ಕಾಮಗಾರಿಗೆ ಅರ್ಹ ಎಸ್.ಟಿ. ಸಿವ್ಹಿಲ್ ಗುತ್ತಿಗೆದಾರರಿಂದ ಹಾಗೂ ಇಂಡೆಂಟ್ ಸಂಖ್ಯೆ 9945/call-02, 12735 ಕಾಮಗಾರಿಗಳಿಗೆ ಅರ್ಹ ಇತರೆ/ಸಾಮಾನ್ಯ ಸಿವ್ಹಿಲ್ ಗುತ್ತಿಗೆದಾರರಿಂದ ಟೆಂಡರ ಆಹ್ವಾನಿಸಲಾಗಿದೆ. ಕಾಮಗಾರಿ ಕೈಗೊಳ್ಳಲು 6 ತಿಂಗಳ ಕಾಲಾವಧಿ ಇರುತ್ತದೆ. ಆನಲೈನಲ್ಲಿ ಟೆಂಡರಗಳನ್ನು ಡೌನಲೋಡ ಮಾಡುವ ದಿನಾಂಕ:17/01/2024 ರಿಂದ ದಿನಾಂಕ:24/01/2024 ರವರೆಗೆ. ಭರ್ತಿ ಮಾಡಿದ ಟೆಂಡರಗಳನ್ನು ಅಪಲೋಡ್ ಮಾಡುವ ಕೊನೆಯ ದಿನಾಂಕ:24/01/2024 ಸಮಯ ಸಂಜೆ 5.30 ಗಂಟೆಯ ವರೆಗೆ. ಹಾಗೂ ಟೆಂಡರನ್ನು ತೆರೆಯುವ ದಿನಾಂಕ:27/01/2024 ರಂದು ಮುಂಜಾನೆ 10.00 ಗಂಟೆಗೆ. ಹೆಚ್ಚಿನ ಮಾಹಿತಿಗಾಗಿ https://kppp.karnataka.gov.in/ ವೆಬ್ ಸೈಟ್ ನಲ್ಲಿ ಲಾಗಿನ್ ಆಗಿ ಪಡೆಯಬಹುದಾಗಿದೆ. ಟೆಂಡರಿನಲ್ಲಿ ತಿದ್ದುಪಡಿ ಇದ್ದಲ್ಲಿ ಆನ್‌ಲೈನ್ ನಲ್ಲಿ ಮಾತ್ರ ತಿಳಿಸಲಾಗುವುದು.

**ಸಹಿ/–ಮುಖ್ಯಾಧಿಕಾರಿಗಳು**
**ಪುರಸಭೆ ಉಗಾರ(ಖುರ್ದ)**

**ಸಹಿ/–ಆಡಳಿತಾಧಿಕಾರಿಗಳು**
**ಪುರಸಭೆ ಉಗಾರ ಖುರ್ದ ಹಾಗೂ ಉಪವಿಭಾಗಾಧಿಕಾರಿಗಳು ಚಿಕ್ಕೋಡಿ**

DIPR/BGM/RO-NO-953/KSMCA/2023-24

## ಪಿ.ಎಂ.ಎಫ್.ಎಂ.ಇ. ನಲ್ಲಿ ಬೆಳಗಾವಿ ಜಿಲ್ಲೆ ಸಾಧನೆ

# ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿ.ಪಂ. ಸಿಇಓ ರಾಹುಲ್ ಶಿಂಧೆ ಪ್ರಶಂಸೆ

ಬೆಳಗಾವಿ: ಜಿಲ್ಲೆಯಲ್ಲಿ ಪಿ.ಎಂ.ಎಫ್. ಎಂ.ಇ. (ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ) ಯೋಜನೆಯಡಿ 514 ಫಲಾನುಭವಿಗಳಿಗೆ ಸಹಾಯಧನದೊಂದಿಗೆ ಸಾಲ ಮಂಜೂರಾತಿ ನೀಡಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ. ಈ ಯೋಜನೆಯಡಿ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಹಾಗೂ ದೇಶದಲ್ಲಿ ಐದನೇ ಸ್ಥಾನ ಪಡೆದಿದೆ ಎಂದು ಜಿಪಂ ಸಿಇಓ ರಾಹುಲ್ ಶಿಂಧೆ ಪ್ರಶಂಸಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ (ಜ.18) ರಂದು ನಡೆದ ಕೃಷಿ, ತೋಟಗಾರಿಕೆ, ರೇಷ್ಮೆ ಹಾಗೂ ಪಶು ಸಂಗೋಪನೆ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

"ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೃಷಿ ಯಂತ್ರಧಾರೆ ಕೇಂದ್ರಗಳು ಹೆಚ್ಚೆಚ್ಚು ರೈತರಿಗೆ ಅನುಕೂಲವಾಗುವಂತೆ ಕಾರ್ಯನಿರ್ವಹಿಸಲು ಕ್ರಮ ವಹಿಸಬೇಕು. ಕೃಷಿ ಇಲಾಖೆಯು ರೈತರಿಗೆ ಹತ್ತಿರವಾದ ಇಲಾಖೆಯಾಗಿದೆ. ಆದ್ದರಿಂದ ರೈತ ಸಮುದಾಯ ಸದ್ಯ ಬರಗಾಲ ಪರಿಸ್ಥಿತಿ ಎದುರಿಸುತ್ತಿರುವುದರಿಂದ ಕೃಷಿಗೆ ಸಂಬಂಧಿಸಿದ ಯಾವುದೇ ಕೊರತೆಗಳು ಉಂಟಾಗದಂತೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ಹಾಗೂ ರೈತರಿಂದ ಯಾವುದೇ ತರಹದ ದೂರುಗಳು ಬರದಂತೆ



ಕಟ್ಟುನಿಟ್ಟಾಗಿ ಕ್ರಮವಹಿಸುವಂತೆ, ಕೃಷಿ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕರು, "ಪ್ರಸಕ್ತ ಮುಂಗಾರು ಹಂಗಾಮಿನ ಜೂನ್ ನಲ್ಲಿ ಮಳೆ ಕೊರತೆ ಉಂಟಾಗಿ ಬಿತ್ತನೆ ಕಾರ್ಯಕ್ಕೆ ಹಿನ್ನಡೆಯಾಗಿತ್ತು. ಆದರೆ, ಜುಲೈನಲ್ಲಿ ಬಂದಂತಹ ಮಳೆಯಿಂದ ಶೇ.95 ರಷ್ಟು ಬಿತ್ತನೆ ಸಾಧ್ಯವಾಯಿತು. ಅಗಸ್ಟ್ ಹಾಗೂ ಸೆಪ್ಟಂಬರ್ ನಲ್ಲಿ ಮತ್ತೆ ಮಳೆ ಕೊರತೆ ಉಂಟಾಗಿ ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾದ ಸುಮಾರು 3.54 ಲಕ್ಷ ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿ ವರದಿಯಾಗಿದೆ. 410.11 ಕೋಟಿ ರೂ. ಪರಿಹಾರ ಬೆಳೆ ಹಾನಿ ಪರಿಹಾರ ಕೋರಿ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ರಾಜ್ಯ ಸರ್ಕಾರದಿಂದ ಬರಗಾಲದಿಂದ ಹಾನಿಗೊಳಗಾದ ರೈತರಿಗೆ ಬೆಳೆ ಸಮೀಕ್ಷೆ ಹಾಗೂ ಪ್ರೂಟ್ಸ್ ತಂತ್ರಾಂಶದ ಮೂಲಕ 2000 ರೂ.ರಂತೆ ಪರಿಹಾರ ವಿತರಣೆ ಕಾರ್ಯ ಪ್ರಗತಿಯಲ್ಲಿದೆ", ಎಂದು ವಿವರಿಸಿದರು.

ಇದೇ ಸಂದರ್ಭದಲ್ಲಿ ಕೃಷಿ ಭಾಗ್ಯ ಯೋಜನೆಯ ಕರಪತ್ರಗಳನ್ನು ಜಿಪಂ ಸಿಇಓ ರಾಹಲ್ ಶಿಂಧೆ ಬಿಡುಗಡೆಗೊಳಿಸಿದರು.

ಮಹಾತ್ಮ ಗಾಂಧಿ ರಾಷ್ಟೀಯ ಉದ್ಯೋಗ ಖಾತ್ರಿ ಯೋಜನೆಯಡಿ ಜಿಲ್ಲೆಯಲ್ಲಿ ಶೇ.67 ರಷ್ಟು ಮಾನವ ದಿನಗಳನ್ನು ಸೃಜಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಪಂ ಸಿಇಓ ರಾಹುಲ್ ಶಿಂಧೆ ಅವರು ಶೇ.100 ರಷ್ಟು ಪ್ರಗತಿ ಸಾಧಿಸಲು ಹಾಗೂ ಬಾಕಿ ಉಳಿದಿರುವ ಸಾಮಗ್ರಿ ಮತ್ತು ಕೂಲಿ ವೆಚ್ಚ ತುರ್ತಾಗಿ ವೆಚ್ಚ ಭರಿಸಲು ಸೂಚಿಸಿದರು.

ಅದೇ ರೀತಿ ತೋಟಗಾರಿಕೆ ಇಲಾಖೆ ಉಪನಿರ್ದೇಶಕರು, ಬೆಳಗಾವಿ ಜಿಲ್ಲೆಯಲ್ಲಿ 11.69 ಲಕ್ಷ ಹೆಕ್ಟೇರ್ ಸಾಗುವಳಿ ಕ್ಷೇತ್ರವಿದ್ದು, ಈ ಪೈಕಿ 59,091 ಹೆಕ್ಟೇರ್ ತೋಟಗಾರಿಕೆ ಕ್ಷೇತ್ರವಿದೆ. ನರೇಗಾದಡಿ ಅನೇಕ ತೋಟಗಾರಿಕೆ ಬೆಳೆಗಳನ್ನು ಬೆಳೆಯಲಾಗುತ್ತಿದೆ. ಹುಕ್ಕೇರಿ ತಾಲೂಕಿನ ಹಿಡಕಲ್ ಡ್ಯಾಂ ತೋಟಗಾರಿಕೆ ಕ್ಷೇತ್ರದಲ್ಲಿ ರೈತರ ಮಕ್ಕಳಿಗೆ 10 ತಿಂಗಳ ಅವಧಿಯ ತೋಟಗಾರಿಕೆ ಬೆಳೆಗಳ ಬೇಸಾಯ ಆಧಾರಿತ ತರಬೇತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಈ ವೇಳೆ ಬೆಳಗಾವಿ ವಿಭಾಗ ಕೃಷಿ ಇಲಾಖೆ ಉಪ ನಿರ್ದೇಶಕರಾದ ಎಸ್.ಬಿ. ಕೊಂಗವಾಡ, ಚಿಕ್ಕೋಡಿ ವಿಭಾಗ ಕೃಷಿ ಇಲಾಖೆ ಉಪ ನಿರ್ದೇಶಕರಾದ ಎಚ್.ಡಿ, ಕೊಳೆಕರ, ತೋಟಗಾರಿಕೆ ಹಾಗೂ ಕೃಷಿ ಇಲಾಖೆಯ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# "ರಾಷ್ಟ್ರೀಯ ಮತದಾರರ ದಿನ–2024ರ ಪೂರ್ವಭಾವಿ ಸಭೆ"

ಬೆಳಗಾವಿ: ಪ್ರತಿಯೊಬ್ಬ ನಾಗರಿಕನ ಮತದಾನದ ಮೌಲ್ಯ ಕುರಿತು ಸಮುದಾಯದ ಜನರಲ್ಲಿ ಜಾಗೃತಿ ಮೂಡಿಸಲು ಮತ್ತು ಮತದಾರರ ನೊಂದಣಿಗೆ ಪ್ರೇರಪಿಸಲು ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ ಶೈಕ್ಷಣಿಕ ಸಂಸ್ಥೆಯ 'ಚುನಾವಣಾ ಸಾಕ್ಷರತಾ ಸಂಘಗಳ' ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ (ಜ.18) ನಡೆದ "ರಾಷ್ಟ್ರೀಯ ಮತದಾರರ ದಿನದ" ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ವಿಶೇಷ ಅಭಿಯಾನದ ಮೂಲಕ ಬೆಳಗಾವಿ ಜಿಲ್ಲೆಯು ಅತೀ ಹೆಚ್ಚು ಯುವ ಮತದಾರರ ನೊಂದಣಿ ಮಾಡಿರುವ ಕುರಿತು ಜಿಲ್ಲಾಧಿಕಾರಿಗಳು ಅಭಿನಂದಿಸಿದರು.

ಅದರ ಜೊತೆಗೆ 4 ವಿಧಧ ಚುನಾವಣಾ ಸಾಕ್ಷರತಾ ಸಂಘಗಳು 1.ಮತದಾರರ ಜಾಗೃತಿ ವೇದಿಕೆ 2. ಚುನಾವಣಾ ಪಾಠಶಾಲಾ 3. ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳು 4. ಕಾರ್ಖಾನೆ ಮತ್ತು ಕಚೇರಿಗಳು ಎಲ್ಲ ವಿಧಾನ ಸಭಾ ಕ್ಷೇತ್ರಗಳಲ್ಲಿ ಕಡ್ಡಾಯವಾಗಿ ಚುನಾವಣಾ ಸಾಕ್ಷರತಾ ಸಂಘಗಳ ಮೂಲಕ ಮತದಾನದ ಜಾಗೃತಿ



ಕಾರ್ಯ ಹಮ್ಮಿಕೊಳ್ಳಲು ತಿಳಿಸಿದರು


ಎಲ್ಲಿ ಚುನಾವಣಾ ಸಾಕ್ಷರತಾ ಸಂಘಗಳು ರಚನೆ ಆಗಿಲ್ಲವೋ ಅಂತಹ ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಚುನಾವಣಾ ಸಾಕ್ಷರತಾ ಸಂಘಗಳು ರಚನೆ ಮಾಡಲು ಕ್ರಮವಹಿಸಲು ಸೂಚಿಸಿದರು.

"ರಾಷ್ಟ್ರೀಯ ಮತದಾರರ ದಿನ" ಜನೆವರಿ 25 ರಂದು ಜಿಲ್ಲೆಯಲ್ಲಿ ಆಯೋಜಿಸಲಾಗುತ್ತಿದ್ದು, ಈ ಸಂಬಂಧ ಜಿಲ್ಲೆಯ ಎಲ್ಲ ಪ್ರೌಢ ಶಾಲೆ, ಪದವಿ ಪೂರ್ವ ಕಾಲೇಜು, ಪದವಿ ಕಾಲೇಜುಗಳಲ್ಲಿ ಹಮ್ಮಿಕೊಳ್ಳಲಾದ ಪ್ರಬಂಧ ಬರಹ, ರಸಪ್ರಶ್ನೆ, ಭಿತ್ತಿ ಚಿತ್ರ ರಚನೆ ಇತರೆ ಸ್ಪರ್ಧೆಗಳಲ್ಲಿ ಜಿಲ್ಲಾ ಮಟ್ಟದಲ್ಲಿ ವಿಜೇತರಾದ ವಿಧ್ಯಾರ್ಥಿ/ವಿಧ್ಯಾರ್ಥಿಗಳಿಗೆ ಪ್ರಮಾಣಪತ್ರ ಹಾಗೂ ಪೆನ್ ವಿತರಿಸುವುದು.

ಅದೇ ರೀತಿ ಮತಕ್ಷೇತ್ರವಾರು ಚುನಾವಣಾ ಸಾಕ್ಷರತಾ ಸಂಘಗಳಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ 10 ಜನರಿಗೆ ಪ್ರಮಾಣಪತ್ರ ವಿತರಣೆ, ಮತ್ತು ಚುನಾವಣಾ ಸಾಕ್ಷರತಾ ಸಂಘಗಳ ಮೂಲಕ ಪದವಿ ಕಾಲೇಜುಗಳಲ್ಲಿ ವಿಧ್ಯಾರ್ಥಿ/ ವಿಧ್ಯಾರ್ಥಿನಿಯರ ಮುಖಾಂತರ ಮತದಾನದ ಕುರಿತು ಸಮುದಾಯದ ಜನರಲ್ಲಿ ವ್ಯಾಪಕ ಪ್ರಚಾರ ಮಾಡಿಸಲು ರಾಣಿ ಚೆನ್ನಮ್ಮಾ ವಿಶ್ವವಿದ್ಯಾಲಯ ಕುಲಸಚಿವರಿಗೆ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳು ವಿಜಯಕುಮಾರ ಹೊನಕೇರಿ, ಆಯುಕ್ತರು ಮಹಾನಗರ ಪಾಲಿಕೆ ಅಶೋಕ ದುಡಗುಂಟಿ, ಸ್ವೀಪ್ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರು, ಅಧೀನ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು/ತಾಲೂಕು ಮಟ್ಟದ ಅಧಿಕಾರಿಗಳು, ರಾಣಿ ಚೆನ್ನಮ್ಮಾ ವಿಶ್ವವಿದ್ಯಾಲಯದ ಕುಲಸಚಿವರು, ಪದವಿ ಕಾಲೇಜಿನ ಮತದಾರರ ಸಾಕ್ಷರತಾ ಸಂಘ(ಇಐಆ')ಗಳ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು, ಇತರೆ ಚುನಾವಣಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಯುವತಿಗೆ ಲೈಂಗಿಕ ಕಿರುಕುಳ



ಬೆಂಗಳೂರು : ಬೆಂಗಳೂರಿನ ವಿಜಯನಗರದ ಹೋಟೆಲ್'ವೊಂದರ ಸಮೀಪ ನಿಂತಿದ್ದ ಯುವತಿಗೆ ಬೇಕು ಬೇಕಂತಲೇ ವಿಕೃತವಾಗಿ ಸ್ಪರ್ಶಿಸಿ ಲೈಂಗಿಕ ಕಿರುಕುಳ ನೀಡಿದ ಘಟನೆ ನಡೆದಿದ್ದು, ಸಾರ್ವಜನಿಕರನ್ನು ಬೆಚ್ಚಿಬೀಳಿಸಿದೆ. ಇನ್ನೂ ಕಾಮುಕನ ಕೃತ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಯುವತಿಯನ್ನು ಟಚ್ ಮಾಡುವ ಉದ್ದೇಶದಿಂದಲೇ ಮೊದಲೇ ಮೂವರು ಯುವಕರು ಪ್ಲಾನ್ ಮಾಡಿಕೊಂಡಿದ್ದರು.

ಓರ್ವ, ಯುವತಿಯ ಬಳಿ ಬಂದು ಆಕೆಯನ್ನು ಹಿಂಭಾಗದಿಂದ ಸ್ಪರ್ಶ ಮಾಡುತ್ತಾನೆ. ಅದನ್ನು ಇಬ್ಬರು ಕಾಮುಕರು ನೋಡುತ್ತಾ ಇರುತ್ತಾರೆ. ಕೂಡಲೇ ಸಿಟ್ಟಿಗೆದ್ದ ಯುವತಿ ಅಲ್ಲೇ ಆತನನ್ನು ಪ್ರಶ್ನೆ ಮಾಡಿದ್ದಾಳೆ. ಆಗ ಆತ ಯುವತಿ ಜೊತೆ ರಂಪಾಟ ಮಾಡಿದ್ದಾನೆ. ಜನವರಿ 10ರಂದು ಈ ಕುರಿತು ವಿಜಯನಗರ ಠಾಣೆಯಲ್ಲಿ ಹೋಟೆಲ್‌ನ ಕ್ಯಾಶಿಯರ್ ಪೊಲೀಸರಿಗೆ ದೂರು ನೀಡಿದ್ದು, ಘಟನೆ ಸಂಬಂಧ ಠಾಣೆಯಲ್ಲಿ ಎಫ್ಐಆರ್ ದಾಖಲಿಸಲಾಗಿದೆ. ಈ ಹಿನ್ನೆಲೆ ಪೊಲೀಸರು ಆರೋಪಿಗಳಿಗಾಗಿ ಬಲೆ ಬೀಸಿದ್ದಾರೆ. ಆರೋಪಗಳಿಗಾಗಿ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ.

## ಆದರ್ಶ ನಾಗರಿಕರನ್ನು ಸೃಷ್ಟಿಸಲು ಕಾನೂನು ಶಿಕ್ಷಣ ಅತ್ಯಗತ್ಯ

ಬೆಳಗಾವಿ: ವಕೀಲ ವೃತ್ತಿ ಘನತೆ ವೃತ್ತಿಯಾಗಿದ್ದು, ಆದರ್ಶ ನಾಗರಿಕರನ್ನು ರೂಪಿಸಲು ಮತ್ತು ಸಮಾಜಕ್ಕೆ ಸೇವೆ ಸಲ್ಲಿಸಲು ಕಾನೂನು ಶಿಕ್ಷಣ ಅತ್ಯಗತ್ಯ. ಪ್ರಸ್ತುತ ಕಾಲಘಟ್ಟದಲ್ಲಿ ವಕೀಲ ವೃತ್ತಿಯು ಸ್ಪರ್ಧಾತ್ಮಕವಾಗಿದೆ ಎಂದು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ಎಸ್.ವಿ. ನಾಡಗೌಡರ ಅಭಿಪ್ರಾಯಪಟ್ಟರು. ನಗರದ ಪ್ರತಿಷ್ಠಿತ ರಾಜಾಲಖಮಗೌಡ ಕಾನೂನು ವಿಶ್ವವಿದ್ಯಾಲಯದಲ್ಲಿ ಪ್ರಥಮ ವರ್ಷದ ಕಾನೂನು ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮವನ್ನು ಉದ್ಘಾಟಿಸಿ ಆರ್ ಎಲ್ ಕಾನೂನು ಕಾಲೇಜಿನ ಪರಂಪರೆ ಕುರಿತು ಹೆಮ್ಮೆ ವ್ಯಕ್ತಪಡಿಸಿದರು.




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಆಡಳಿತ ಮಂಡಳಿ ಚೇರ್ಮನ್ ಎಂ.ಆರ್. ಕುಲಕರ್ಣಿ ವಿದ್ಯಾರ್ಥಿಗಳಿಗೆ ವಕೀಲಿ ವೃತ್ತಿಯ ಕುರಿತು ಸಲಹೆ ನೀಡುತ್ತಾ ವಿದ್ಯಾರ್ಥಿಗಳು ನಿರಂತರವಾಗಿ ಕಷ್ಟಪಟ್ಟು ಕೆಲಸ ಮಾಡಬೇಕು. ಹಣದ ಹಿಂದೆ ಹೋಗಬಾರದು; ಪ್ರಾಮಾಣಿಕ ಪರಿಶ್ರಮವಿದ್ದರೆ, ಹಣ ಮತ್ತು ಅವಕಾಶಗಳು ನಿಮ್ಮನ್ನು ಹಿಂಬಾಲಿಸುತ್ತದೆ. ಆದರೆ ಸಂಕಲ್ಪ ಮುಖ್ಯ ಎಂದು ವಿವರಿಸಿದರು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯ ಡಾ.ಎ.ಎಚ್.ಹವಾಲ್ದಾರ್ ಮಾತನಾಡಿ, ಈ ಕಾಲೇಜಿನಲ್ಲಿ ಉತ್ತೀರ್ಣರಾದ ನಂತರ ಮಗುವಿಗೆ ಭವಿಷ್ಯದಲ್ಲಿ ಉಜ್ವಲ ಭವಿಷ್ಯವಿದೆ ಎಂದು ಪೋಷಕರಿಗೆ ಭರವಸೆ ನೀಡಿದರು.

ಕಾಲೇಜಿನ ಐಕ್ಯೂಎಸಿ ವಿಭಾಗದಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ, ವಿಭಾಗದ ಸಂಯೋಜಕಿ ಡಾ. ಸಮಿನಾ ಬೇಗ್, ಅಧ್ಯಾಪಕ ವೃಂದ, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿ ಸುನಿಧಿ ಜೋಶಿ ಗಣ್ಯರನ್ನು ಪರಿಚಯಿಸಿದರು. ಡಾ. ಸಮಿನಾ ಬೇಗ್ ಸ್ವಾಗತಿಸಿ, ವಿದ್ಯಾರ್ಥಿನಿಯರಾದ ನೇಹಾ ಹಾಗೂ ಅನುಜಾ ನಿರೂಪಿಸಿ, ರುಚಿತ್ರಾ ವಂದಿಸಿದರು.

## ಪಿತಾಶ್ರೀ ಬ್ರಹ್ಮಾ ಬಾಬಾರವರ 55ನೇ ಯ ಸ್ಮೃತಿ ದಿನ

ಬೆಳಗಾವಿ: ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಸಂಸ್ಥಾಪಕರಾದ ಪಿತಾಶ್ರೀ ಬ್ರಹ್ಮಾ ಬಾಬಾರವರ ದಿನಾಂಕ 18–01–1969 ರಂದು ಇಹಲೋಕ ತ್ಯಜಿಸಿದರು. ವ್ಯಕ್ತದಿಂದ ಅವ್ಯಕ್ತರಾದ ದಿನ. ಈ ದಿನವನ್ನು ವಿಶ್ವ ಶಾಂತಿ ದಿನವನ್ನಾಗಿ ಇಡೀ ಜಗತ್ತಿನಾದ್ಯಂತ ಆಚರಿಸಲಾಗುತ್ತಿದೆ.

ಬೆಳಗಾವಿಯ ಮುಖ್ಯಕೇಂದ್ರ ಮಹಾಂತೇಶ ನಗರದಲ್ಲಿ ರಾಜಯೋಗಿನಿ ಬ್ರಹ್ಮಾಕುಮಾರಿ



ಅಂಬಿಕಾ ಅಕ್ಕನವರು ಪಿತಾಶ್ರೀ ಬ್ರಹ್ಮಾ ಬಾಬಾರವರ ಜೀವನ ಚರಿತೆ ಬಗ್ಗೆ ತಿಳಿಸಿ ಸ್ಮೃತಿ ದಿನವನ್ನು ಆಚರಿಸಲಾಯಿತು. ಬೆಳಗಾವಿಯ ಸ್ಥಳಿ ಸೇವಾಕೇಂದ್ರಗಳಾದ ಸಿಟಿ ಸೆಂಟರ, ಶಹಾಪುರ, ಅನಗೋಳ, ಗಣೇಶಪುರದ ಲಕ್ಷ್ಮೀ ನಗರ, ಶಾವೂ ನಗರ, ರಾಮತೀರ್ಥ ನಗರ, ಟಿಳಕವಾಡಿ, ಶಾಸ್ತ್ರಿ ನಗರ, ಹನುಮಾನ ನಗರ, ಭಾಗ್ಯ ನಗರ, ರಾಣಿ ಚೆನ್ನಮ್ಮಾ ನಗರ, ಪಂತ ನಗರ, ಸಾಬ್ರಾ, ಗೋಕುಲ ನಗರ, ಕಿಣಯೇ ರಿಟ್ರಿಟ ಸೆಂಟರ ಹಾಗೂ ಜಗತ್ತಿನ 140 ದೇಶಗಳಲ್ಲಿ ಬ್ರಹ್ಮಾ ಬಾಬಾರವರ ಸ್ಮೃತಿ ದಿನವನ್ನು ಆಚರಿಸಲಾಯಿತು.



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಧಾರವಾಡ ಜಿಲ್ಲಾ ಘಟಕ ರೂಪಿಸಿರುವ 2024ನೇ ಸಾಲಿನ ದಿನದರ್ಶಿಕೆ (ಕ್ಯಾಲೆಂಡರ್) ಯನ್ನು ಇಂದು ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಭಾರ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ., ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಸಂಗಪ್ಪ ಗಾಬಿ ಮತ್ತು ಜಿಲ್ಲಾಧ್ಯಕ್ಷ ಎಸ್.ಎಫ್. ಸಿದ್ದನಗೌಡರ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ನೌಕರ ಸಂಘದ ಜಿಲ್ಲಾ ಪದಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಜಿಲ್ಲೆಯಾದ್ಯಂತ ಜ.26 ರಿಂದ ಸಂವಿಧಾನ ಜಾಗೃತಿ ಜಾಥಾ


# ಜಿಲ್ಲೆಯಾದ್ಯಂತ ಸ್ತಬ್ಧಚಿತ್ರ ಸಂಚಾರ; ಸ್ತಬ್ಧಚಿತ್ರ ಜಾಥಾವನ್ನು ಅಚ್ಚುಕಟ್ಟಾಗಿ ಮಾಡಬೇಕು : ಪ್ರಭಾರ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ.

ಧಾರವಾಡ: ಸಂವಿಧಾನದ ಮೌಲ್ಯಗಳು ಮತ್ತು ಆಶಯಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಸಂವಿಧಾನ ಜಾಗೃತಿ ಜಾಥಾ ನಡೆಯಲಿದ್ದು, ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿಗಳಿಗೆ ಸಂವಿಧಾನ ಜಾಗೃತಿ ಜಾಥಾ ಸ್ತಬ್ಧಚಿತ್ರವು ಭೇಟಿ ನೀಡಲಿದೆ ಎಂದು ಪ್ರಭಾರ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ ತಿಳಿಸಿದರು.

ಅವರು ಇಂದು ಮಧ್ಯಾಹ್ನ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ, ಬರುವ ಜ.26 ರಿಂದ ಫೆಬ್ರವರಿ 24 ರವರೆಗೆ ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾಥಾ ಆಯೋಜಿಸುವ ಹಿನ್ನೆಲೆಯಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳ ಪೂರ್ವಭಾವಿ ಸಿದ್ದತಾ ಸಭೆ ಜರುಗಿಸಿ, ಮಾತನಾಡಿದರು.

ಗಣರಾಜ್ಯೋತ್ಸವ ದಿನ(ಜ.26)ದಂದು ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಆಯಾ ಜಿಲ್ಲಾ ಉಸ್ತುವಾರಿ ಸಚಿವರು ಸಂವಿಧಾನ ಜಾಗೃತಿ ಜಾಥಾಗೆ ಚಾಲನೆ ನೀಡಲಿದ್ದಾರೆ.

ಜಾಗೃತಿ ಜಾಥಾದ ಸ್ತಬ್ಧಚಿತ್ರವು ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡುವ ಮೂಲಕ ಸಂವಿಧಾನದ ಮೌಲ್ಯಗಳು ಮತ್ತು ಆಶಯಗಳ ಕುರಿತು ಅರಿವು ಮೂಡಿಸಲಿದೆ.



ಜಿಲ್ಲೆಯಾದ್ಯಂತ ಸಂಚರಿಸಲಿರುವ ಸ್ತಬ್ಧಚಿತ್ರವು ಫೆ.25 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ರಾಜ್ಯಮಟ್ಟದ ಸಂವಿಧಾನ ಜಾಗೃತಿ ಸಮಾವೇಶದಲ್ಲಿ ಭಾಗವಹಿಸಲಿದೆ ಎಂದು ಅವರು ತಿಳಿಸಿದರು.

ಜಿಲ್ಲೆಯಲ್ಲಿ ನಡೆಯಲಿರುವ ಜಾಥಾ ಯಶಸ್ವಿಗೊಳಿಸಲು ಜಿಲ್ಲಾ ಪಂಚಾಯತಿ, ಕಂದಾಯ, ಪೊಲೀಸ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ಪ್ರತಿಯೊಂದು ಇಲಾಖೆಯ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು.

ಜಿಲ್ಲೆಯಲ್ಲಿ ಸಂಚರಿಸಲಿರುವ ಸ್ತಬ್ಧಚಿತ್ರ ಜಾಥಾವನ್ನು ಅಚ್ಚುಕಟ್ಟಾಗಿ ಮಾಡಬೇಕು ಎಂದು ಪ್ರಭಾರ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ. ಅವರು ತಿಳಿಸಿದರು.

ಹುಬ್ಬಳ್ಳಿ ಧಾರವಾಡ ಮಹಾನಗರ ಉಪ ಪೊಲೀಸ ಆಯುಕ್ತರಾದ ರಾಜೀವ ಎಂ. ಅವರು ಮಾತನಾಡಿ, ಸ್ತಬ್ದಚಿತ್ರ ಜಾಥಾ ಸಂಚರಿಸುವ ಮಾರ್ಗ, ಅದರ ನಿಲುಗಡೆ ಸ್ಥಳ ಮತ್ತು ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯುವ ಸ್ಥಳಗಳನ್ನು ಮೊದಲೇ ತಿಳಿಸಿದರೆ,ಸೂಕ್ತ ರಕ್ಷಣೆ ಹಾಗೂ ಸುಗಮ ಸಂಚಾರಕ್ಕೆ ಅಗತ್ಯ ಸಿದ್ದತೆ ಮಾಡಿಕೊಳ್ಳಲು ಅನುಕೂಲವಾಗುತ್ತದೆ ಎಂದು ಹೇಳಿದರು. ಹೆಚ್ಚುವರಿ ಪೊಲೀಸ ಅಧೀಕ್ಷಕ ನಾರಾಯಣ ಬರಮನಿ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಜಾಥಾ ಯಶಸ್ವಿಗೊಳಿಸಲು ಅಗತ್ಯ ಬಂದೊಬಸ್ತ ನೀಡಲಾಗುವುದು ಎಂದರು.

ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕ ಅಲ್ಲಾಬಕಾಷ ಎಂ.ಎಸ್. ಅವರು ಮಾತನಾಡಿ,

ಸಂವಿಧಾನ ಜಾಗೃತಿ ಜಾಥಾದ ವೇಳಾಪಟ್ಟಿಯನ್ನು ತಹಸಿಲ್ದಾರ ಹಾಗೂ ತಾ.ಪಂ. ಅಧಿಜಾರಿಗಳಿಗೆ ಮುಂಚಿತವಾಗಿ ನೀಡಲಾಗುವುದು.

ಆಯಾ ಗ್ರಾಮ ಪಂಚಾಯಿತಿಗೆ ಸ್ತಬ್ಧಚಿತ್ರ ಆಗಮಿಸಿದಾಗ ಪಿಡಿಓ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಅದನ್ನು ಬರಮಾಡಿಕೊಂಡು ಸಂವಿಧಾನ ಕುರಿತು ಜಾಗೃತಿ ಮೂಡಿಸಬೇಕೆಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಶಶಿ ಪಾಟೀಲ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಸಂಗಪ್ಪ ಗಾಬಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಪದ್ಮಾವತಿ, ಎಲ್ಲ ತಾಲೂಕುಗಳ ತಹಸಿಲ್ದಾರರು, ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ಲೋಕ ಅದಾಲತ ಮಾ.9 ರಂದು

ಬೆಳಗಾವಿ: ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದ ಮೇರೆಗೆ ವೈವಾಹಿಕ, ಕೌಟುಂಬಿಕ ಮತ್ತು ಪಾಲು ವಿಭಾಗಕ್ಕೆ, ಬ್ಯಾಂಕುಗಳಿಗೆ ಸಂಬಂಧಪಟ್ಟ ಪ್ರಕರಣಗಳು ಹಾಗೂ ಚೆಕ್ ಬೌನ್ಸ, ಭಾರತ ದಂಡ ಸಂಹಿತೆಯ ರಾಜಿಯಾಗಬಲ್ಲ ಪ್ರಕರಣಗಳು, ಹಣಕಾಸಿನ ದಾವೆಗಳು, ಸಿವಿಲ್ ವ್ಯಾಜ್ಯಗಳು, ಮೋಟಾರ ವಾಹನ ಅಪಘಾತ ಪರಿಹಾರಕ್ಕೆ ಸಂಬಂಧಪಟ್ಟ ಪ್ರಕರಣಗಳು, ಕಂದಾಯ ಪ್ರಕರಣಗಳು ಮತ್ತು ಇತರ ಎಲ್ಲಾ ರೀತಿಯ ರಾಜಿಯಾಗು ಪ್ರಕರಣಗಳ ಕುರಿತು ಹಾಗೂ ನ್ಯಾಯಾಲಯಗಳಲ್ಲಿ ತನಿಕೆಗೆ ಬಾಕಿ ಇರುವ ಪ್ರಕರಣಗಳ ಕುರಿತು ಬೆಳಗಾವಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧಿಶರಾದ ಗೌರವಾನ್ವಿತ ಎಲ್. ವಿಜಯಲಕ್ಷ್ಮೀ ದೇವಿ ಇವರ ಮಾರ್ಗದರ್ಶನದಲ್ಲಿ ಬೆಳಗಾವಿಯ ಎಲ್ಲ ನ್ಯಾಯಾಲಯಗಳಲ್ಲಿ ಹಾಗೂ ಎಲ್ಲಾ ತಾಲೂಕುಗಳ ನ್ಯಾಯಾಲಯಗಳಲ್ಲಿ ಮಾರ್ಚ:09 24 ರಂದು ಬೆಳಿಗ್ಗೆ 11 ಘಂಟೆಯಿಂದ ಜಿಲ್ಲೆಯ ಎಲ್ಲಾ ನ್ಯಾಯಾಧೀಶರ ಹಾಗೂ ವಕೀಲರ ಸಹಯೋಗದಲ್ಲಿ ಲೋಕ ಅದಾಲತನ್ನು ಹಮ್ಮಿಕೊಳ್ಳಲಾಗಿದೆ.

ಸದರಿ ಪ್ರಕರಣಗಳನ್ನು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ತೆಗೆದುಕೊಂಡು ರಾಜಿ ಸಂಧಾನದ ಮುಖಾಂತರ ಇತ್ಯರ್ಥಪಡಿಸಲಾಗುವುದು.

ಬ್ಯಾಂಕುಗಳು, ಕಕ್ಷಿದಾರರು ಹಾಗೂ ಜನ ಸಾಮಾನ್ಯರು ಈ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೆಳಗಾವಿ ತಾಲೂಕಾ ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಬಹುದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

ಬೆಳಗಾವಿ: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಬೆಳಗಾವಿ ಜಿಲ್ಲೆಯ, ರಾಯಭಾಗ ತಾಲೂಕಿನ ಹಾಲಿ ಚಾಲ್ತಿಯಲ್ಲಿರುವ 110ಕೆವಿ ರಾಯಭಾಗ–ಇಟ್ನಾಳ ವಿದ್ಯುತ್ ಪ್ರಸರಣ ಮಾರ್ಗದಿಂದ 'ಬೊಮ್ಮನಾಳ' ಗ್ರಾಮದಲ್ಲಿ ಹೊಸದಾಗಿ ನಿರ್ಮಿಸಿರುವ 110/11ಕೆವಿ ವಿದ್ಯುತ್ ಉಪ–ಕೇಂದ್ರಕ್ಕೆ ಲೀಲೋ 0.559ಕಿ.ಮೀ ಉದ್ದದ ವಿದ್ಯುತ್ ಪ್ರಸರಣ ಮಾರ್ಗವನ್ನು ನಿರ್ಮಿಸಲಾಗಿದೆ.

ಸದರಿ 110 ಕೆವಿ ವಿದ್ಯುತ್ ಪ್ರಸರಣ ಮಾರ್ಗವು ಬೆಳಗಾವಿ ಜಿಲ್ಲೆಯ ರಾಯಭಾಗ ತಾಲೂಕಿನ ನಿಡಗುಂದಿ ಹಾಗೂ ಬೊಮ್ಮನಾಳ ಅಕ್ಕಪಕ್ಕದ ಹದ್ದಿನಲ್ಲಿ ಬರುವ ಹಳ್ಳಿಗಳು ಮತ್ತು ಸರಹದ್ದಿನ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಹಾಯ್ದು ಹೋಗುತ್ತದೆ.

ವಿದ್ಯುತ್ ಪ್ರಸರಣ ಮಾರ್ಗವನ್ನು ಜ 25 2024 ರಂದು ಇಲ್ಲವೆ ತದನಂತರ ಯಾವುದೇ ಕ್ಷಣದಲ್ಲಿ ವಿದ್ಯುತ್ ಹರಿಬಿಡಲಾಗುವದು, ಕಾರಣ ವಿದ್ಯುತ್ ಗೋಪುರಗಳನ್ನು ಹತ್ತುವುದಾಗಲಿ ಅಥವಾ ತಂತಿಗಳನ್ನು ಮುಟ್ಟುವುದಾಗಲಿ ಹಸಿರು ಟೊಂಗೆಗಳನ್ನು ಎಸೆಯುವುದಾಗಲಿ ಮತ್ತು ಲೈನ್ ಕೆಳಗಡೆ ದನಕರುಗಳನ್ನು ಕಟ್ಟುವುದಾಗಲಿ, ಗಿಡಮರಗಳನ್ನು ನೆಡುವುದಾಗಲಿ, ಮನೆ/ ಗುಡಿಸಲುಗಳನ್ನು ನಿರ್ಮಿಸುವುದಾಗಲಿ ಪ್ರಾಣಾಪಾಯಕ ವಾಗುವುದು ಎಂದು ಸಾರ್ವಜನಿಕರಿಗೆ ತಿಳಿಸಲಾಗಿದೆ.

ಒಂದು ವೇಳೆ ಇಂತಹ ಕೃತ್ಯಗಳನ್ನು ಯಾರಾದರು ಎಸಗಿದಲ್ಲಿ ಮುಂದೆ ಒದಗಬಹುದಾದ ಅಪಾಯಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗಿರುವುದಿಲ್ಲ ಎಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ವಿ), ಬೃಹತ್ ಕಾಮಗಾರಿ ವಿಭಾಗ ಕಾರ್ಯನಿರ್ವಾಹಕ ಅಭಿಯಂತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಹರಿವು ಸಾರ್ವಜನಿಕರಿಗೆ ಎಚ್ಚರಿಕೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ, ಗೋಕಾಕ ತಾಲೂಕಿನ ಹಾಲಿ ಚಾಲ್ತಿಯಲ್ಲಿರುವ 110ಕೆವಿ. ಪಿ. ಜಿ. ಹುನಶ್ಯಾಳ ವಿದ್ಯುತ್ ಉಪ ಕೇಂದ್ರದಿಂದ ಹಡಗಿನಾಳ ಗ್ರಾಮದಲ್ಲಿ ಹೊಸದಾಗಿ ನಿರ್ಮಿಸಿರುವ ವಿದ್ಯುತ್ ಉಪಕೇಂದ್ರಕ್ಕೆ ಜೋಡಿ ಗೋಪುರಗಳ ಮೇಲೆ 6,525ಕೀ.ಮಿ ಉದ್ದದ ಒಂಟಿ ವಿದ್ಯುತ್ ಪ್ರಸರಣ ಮಾರ್ಗವನ್ನು ನಿರ್ಮಿಸಲಾಗಿದೆ

ಸದರಿ 110 ಕೆವಿ ವಿದ್ಯುತ್ ಪ್ರಸರಣ ಮಾರ್ಗವು ಬೆಳಗಾವಿ ಜಿಲ್ಲೆಯ ಗೋಕಾಕ ತಾಲೂಕಿನ ಪಿ. ಜಿ. ಹುನಶ್ಯಾಳ, ಬೀರನಗುಡ್ಡಿ, ಕಲಾರಕೊಪ್ಪ ಹಾಗೂ ಹಡಗಿನಾಳ ಅಕ್ಕಪಕ್ಕದ ಹದ್ದಿನಲ್ಲಿ ಬರುವ ಹಳ್ಳಿಗಳು ಮತ್ತು ಸರಹದ್ದಿನ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಹಾಯ್ದು ಹೋಗುತ್ತದೆ.

ವಿದ್ಯುತ್ ಪ್ರಸರಣ ಮಾರ್ಗವನ್ನು ಜ 25 ರಂದು ಇಲ್ಲವೆ ತದನಂತರ ಯಾವುದೇ ಕ್ಷಣದಲ್ಲಿ ವಿದ್ಯುತ್ತನ್ನು ಹರಿಬಿಡಲಾಗುವದು ಕಾರಣ ವಿದ್ಯುತ್ ಗೋಪುರಗಳನ್ನು ಹತ್ತುವುದಾಗಲಿ ಅಥವಾ ತಂತಿಗಳನ್ನು ಮುಟ್ಟುವುದಾಗಲಿ ಹಸಿರು ಟೊಂಗೆಗಳನ್ನು ಎಸೆಯುವುದಾಗಲಿ ಮತ್ತು ಲೈನ್ ಕೆಳಗಡೆ ದನಕರುಗಳನ್ನು ಕಟ್ಟುವುದಾಗಲಿ, ಗಿಡಮರಗಳನ್ನು ನೆಡುವುದಾಗಲಿ, ಮನೆ/ಗುಡಿಸಲುಗಳನ್ನು ನಿರ್ಮಿಸುವುದಾಗಲಿ ಪ್ರಾಣಾಪಯವಾಬಹುದು ಎಂದು ಸಾರ್ವಜನಿಕರಿಗೆ ತಿಳಿಸಲಾಗಿದೆ.

ಒಂದು ವೇಳೆ ಇಂತಹ ಕೃತ್ಯಗಳನ್ನು ಯಾರಾದರು ಎಸಗಿದಲ್ಲಿ ಮುಂದೆ ಒದಗಬಹುದಾದ ಅಪಾಯಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗಿರುವುದಿಲ್ಲ ಎಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ವಿ), ಬೃಹತ್ ಕಾಮಗಾರಿ ವಿಭಾಗ ಕಾರ್ಯನಿರ್ವಾಹಕ ಅಭಿಯಂತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಬಹಿರಂಗ ಹರಾಜ

ಧಾರವಾಡ: ಧಾರವಾಡ ಮೀನುಗಾರಿಕೆ ಕಚೇರಿಯ ಆವರಣದಲ್ಲಿ ಇಲಾಖಾ ವಾಹನ ಸಂಖ್ಯೆ: ಕೆಎ–25 ಎಂ–7702 ಟೆಂಪೋ ಟ್ರಕ್ಸ (ಜೊಡೋ) ಗುಜರಿ ವಾಹನ ವಿಲೇವಾರಿಯನ್ನು ಫೆ.14 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗವಾಗಿ ಹರಾಜು ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ. 0836–2447416ನ್ನು ಸಂಪರ್ಕಿಸಬಹುದೆಂದು ಮೀನುಗಾರಿಕೆ ಉಪ ನಿದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# "ಸಂವಿಧಾನ ಜಾಗೃತಿ ಜಾಥಾ": ಜ.26 ರಿಂದ ಜಿಲ್ಲೆಯಾದ್ಯಂತ ಸ್ತಬ್ಧಚಿತ್ರ ಸಂಚಾರ

## ಅಗತ್ಯ ಸಿದ್ಧತೆಗೆ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ



ಬೆಳಗಾವಿ: ಸಂವಿಧಾನದ ಮೌಲ್ಯಗಳು ಮತ್ತು ಆಶಯಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ "ಸಂವಿಧಾನ ಜಾಗೃತಿ ಜಾಥಾ" ನಡೆಯಲಿದ್ದು, ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿಗಳಿಗೆ "ಸಂವಿಧಾನ ಜಾಗೃತಿ ಜಾಥಾ" ಸ್ತಬ್ಧಚಿತ್ರವು ಭೇಟಿ ನೀಡಲಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

"ಸಂವಿಧಾನ ಜಾಗೃತಿ ಜಾಥಾ" ಹಿನ್ನೆಲೆಯಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತರಾಜ್ ಇಲಾಖೆಯ ಸಚಿವರಾದ ಪ್ರಿಯಾಂಕ್ ಖರ್ಗೆ ಅವರ ಅಧ್ಯಕ್ಷತೆಯಲ್ಲಿ ಗುರುವಾರ(ಜ.18) ನಡೆದ ರಾಜ್ಯಮಟ್ಟದ ವಿಡಿಯೋ ಸಂವಾದದ ಬಳಿಕ ನಡೆದ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಗಣರಾಜ್ಯೋತ್ಸವ ದಿನ(ಜ.26)ದಂದು ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಆಯಾ ಜಿಲ್ಲಾ ಉಸ್ತುವಾರಿ ಸಚಿವರು "ಸಂವಿಧಾನ ಜಾಗೃತಿ ಜಾಥಾ" ಗೆ ಚಾಲನೆ ನೀಡಲಿದ್ದಾರೆ.

ಜಾಗೃತಿ ಜಾಥಾದ ಸ್ತಬ್ಧಚಿತ್ರವು ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿಗಳಿಗೆ ಮತ್ತು ಇತರೆ ಸರಕಾರಿ ಕಚೇರಿಗಳಿಗೆ ಭೇಟಿ ನೀಡುವ ಮೂಲಕ ಸಂವಿಧಾನದ ಮೌಲ್ಯಗಳು ಮತ್ತು ಆಶಯಗಳ ಕುರಿತು ಅರಿವು ಮೂಡಿಸಲಿದೆ.

ಹೀಗೆ ಜಿಲ್ಲೆಯಾದ್ಯಂತ ಸಂಚರಿಸಲಿರುವ ಸ್ತಬ್ಧಚಿತ್ರವು ಫೆ.25 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ರಾಜ್ಯಮಟ್ಟದ ಸಂವಿಧಾನ ಜಾಗೃತಿ ಸಮಾವೇಶದಲ್ಲಿ ಭಾಗವಹಿಸಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಒಂದು ತಿಂಗಳುಗಳ ಕಾಲ ನಡೆಯಲಿರುವ ಜಾಥಾ ಯಶಸ್ವಿಗೊಳಿಸಲು ಜಿಲ್ಲಾ ಪಂಚಾಯತಿ, ಕಂದಾಯ, ಪೊಲೀಸ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ಪ್ರತಿಯೊಂದು ಇಲಾಖೆಯ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು.

ಜಿಲ್ಲೆಯಲ್ಲಿ ಸಂಚರಿಸಲಿರುವ ಸ್ತಬ್ಧಚಿತ್ರವು ಬೆಂಗಳೂರಿನ ಅರಮನೆಯ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವುದರಿಂದ ಜಾಥಾವನ್ನು ಅಚ್ಚುಕಟ್ಟಾಗಿ ಮಾಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಸಂವಿಧಾನ ಜಾಗೃತಿ ಜಾಥಾವು ಸರಕಾರದ ಮಹತ್ವಾಕಾಂಕ್ಷಿ ಕಾರ್ಯಕ್ರಮವಾಗಿರುವುದರಿಂದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳ ಜತೆ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ಸಂವಿಧಾನ ಜಾಗೃತಿ ಜಾಥಾದ ವೇಳಾಪಟ್ಟಿಯನ್ನು ಮುಂಚಿತವಾಗಿ ನೀಡಲಾಗುವುದು. ಆಯಾ ಗ್ರಾಮ ಪಂಚಾಯಿತಿಗೆ ಸ್ತಬ್ಧಚಿತ್ರ ಆಗಮಿಸಿದಾಗ ಪಿಡಿಓ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಅದನ್ನು ಬರಮಾಡಿಕೊಂಡು ಸಂವಿಧಾನ ಕುರಿತು ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಲಕ್ಷ್ಮಣ ಬಬಲಿ ತಿಳಿಸಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ ಕಲಾದಗಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ್ ಕಂಕಣವಾಡಿ, ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರಾದ ರಾಜಶ್ರೀ ಜೈನಾಪುರ, ವಾರ್ತಾ ಇಲಾಖೆಯ ಉಪ ನಿರ್ದೇಶಕ ಗುರುನಾಥ ಕಡಬೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಬಸವರಾಜ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಕಾರ್ಯಕ್ರಮ



ಬೆಳಗಾವಿ: ಸರಕಾರಿ ಸರಸ್ವತಿ ಬಾಲಕಿಯರ ಪದವಿಪೂರ್ವ ಮಹಾವಿದ್ಯಾಯ ಬೆಳಗಾವಿ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರೇಂಜರ್ ಘಟಕಗಳ ಆಶ್ರಯದಲ್ಲಿ ಮಂಗಳವಾರ ಜ.16 ರಂದು ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಕಾರ್ಯಕ್ರಮ ನಡೆಯಿತು.

ವಡಗಾಂವ ಠಾಣೆ ಪೊಲೀಸ್, ಎಸ್.ಐ ನಾಗರಾಜ ಅವರು ಮಾತನಾಡಿ ಹಲವು ರಸ್ತೆ ಸುರಕ್ಷತಾ ನಿಯಮಗಳನ್ನು ತಿಳಿಸಿದರು.

ಅದೇ ರೀತಿಯಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ವಡಗಾಂವ ಪೊಲೀಸ್ ಠಾಣೆಯ ಪಿ.ಎಸ್.ಐ. ಮಣಿಕಂಠ ಅ. ಪೂಜಾರಿ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹದಲ್ಲಿ ದ್ವಿಚಕ್ರವಾಹನ ಚಾ(ಖ)ಕರಿಗೆ ಹಲ್ಮೆಟ್ ಹಾಗೂ ಕಾರುಗಳ ಚಾಕರಿಗೆ ಸೀಟ್‌ಬೆಲ್ಟ್ ಹಾಕಿಕೊಳ್ಳಬೇಕು. ಸಿಗ್ನಲ್ಗಳ ಬಗ್ಗೆ ಮಾಹಿತಿ, ವಾಹನ ಚಲಾಯಿಸುವಾಗ ಮೊಬೈಲ್ನಲ್ಲಿ ಮಾತನಾಡಬಾರದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಎನ್.ಬಿ.ಶಿರಶ್ಯಾಡ, ಸರಕಾರಿ ಸರಸ್ವತಿ ಬಾಲಕಿಯರ ಪದವಿಪೂರ್ವ ಮಹಾವಿದ್ಯಾಯದ ಉಪನ್ಯಾಸಕಿ ಅನುಪಮಾ ಹಾಗೂ ರೇಂಜರ್ ಲೀಡರರಾದ ಜ್ಯೋತಿ.ಆರ್.ಮರೇಗುದ್ದಿ, ಅವರು ನಿರೂಪಿಸಿ, ವಂದಿಸಿದರು.

# ಶ್ರೀರಾಮನ ಕೃಪೆಗೆ ಪಾತ್ರರಾಗೋಣ ಚನ್ನಬಸವ ಶ್ರೀ



ಕೆಂಭಾವಿ: ಜ. 22 ರಂದು ನಡೆಯಲಿರುವ ಅಯೋಧ್ಯಾ ಶ್ರೀರಾಮ ಮಂದಿರ ಉದ್ಘಾಟನೆ ಹಾಗೂ ರಾಮ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ನಿಮಿತ್ತ ಪಟ್ಟಣದಲ್ಲಿ ಅಯೋಧ್ಯಾ ಶ್ರೀರಾಮ ಭಾವಚಿತ್ರ ಪವಿತ್ರ ಮಂತ್ರಾಕ್ಷತೆಯನ್ನು ಮನೆಮನೆಗಳಿಗೆ ಹಂಚುವ ಅಭಿಯಾನಕ್ಕೆ ಗುರುವಾರ ಕೆಂಭಾವಿ ಹಿರೇಮಠದ ಪೀಠಾಧಿಪತಿ ಚನ್ನಬಸವ ಶಿವಾಚಾರ್ಯರು, ಮುದನೂರು ಕಂಠಿ ಮಠದ ಸಿದ್ದ ಚೆನ್ನ ಮಲ್ಲಿಕಾರ್ಜುನ ಶಿವಾಚಾರ್ಯರು, ಕೂಡಲಿಗಿಯ ಬಾಬಾ ಮಠದ ಗಣಪತಿ ಮಹಾರಾಜರು, ಕರಡಕಲ್ ಕೋರಿ ಸಿದ್ದೇಶ್ವರ ಶಾಖಾ ಮಠದ ವಕ್ತಾರ ಶಿವಪ್ರಕಾಶ ಸ್ವಾಮಿ ಸಹಯೋಗದಲ್ಲಿ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಕೆಂಭಾವಿ ಹಿರೇಮಠದ ಪೀಠಾಧಿಪತಿ ಚನ್ನಬಸವ ಶಿವಾಚಾರ್ಯರು ಮಾತನಾಡಿ ರಾಷ್ಟ್ರದ ಬಹು ಕೋಟಿ ಹಿಂದುಗಳ ಕನಸು ನನಸಾಗುವ ಸುಸಂದರ್ಭಕ್ಕೆ ಇನ್ನೇನು ಕೆಲವೆ ಗಂಟೆಗಳು ಬಾಕಿ ಇರುವುದು, ಮಂತ್ರಾಕ್ಷತೆಯ ರೂಪದಲ್ಲಿ ಪ್ರತಿಯೊಬ್ಬರ ಮನೆಗೂ ಭಗವಾನ ಶ್ರೀರಾಮನೆ ನಮ್ಮ ನಮ್ಮ ಮನೆಗಳಲ್ಲಿ ಪ್ರವೇಶ ಮಾಡುತ್ತಿದ್ದಾನೆ. ನಿತ್ಯವೂ ಮಂತ್ರಾಕ್ಷತೆ ಪೂಜೆ ಮಾಡುವುದರ ಮೂಲಕ ರಾಮನ ಕೃಪೆಗೆ ಪಾತ್ರರಾಗೋಣ ಎಂದ ಅವರು ಜ. 22 ರಂದು ರಾಮ ಭಕ್ತರು ನಮ್ಮಗಳ ಮನೆಯಲ್ಲಿ ರಾಮನಾಮ ಸ್ಮರಣೆ ನಡೆಯಬೇಕು, ಮನೆಗಳನ್ನು ತಳಿರು ತೋರಣದಿಂದ ಅಲಂಕರಿಸಬೇಕು, ಅಂದು ರಾತ್ರಿ ಮನೆಯ ಮುಂದೆ ದೀಪ ಬೆಳಗಿಸುವುದರ ಮೂಲಕ ರಾಮ ಭಕ್ತಿ ಮೆರೆಯಬೇಕು ಎಂದರು.

ನಂತರ ಶ್ರೀರಾಮಚಂದ್ರ ಮತ್ತು ರಾಮ ಭಕ್ತ ಹನುಮಾನನ ಭಾವಚಿತ್ರವನ್ನು ಡೊಳ್ಳು ಕಲಾತಂಡ ಹಾಗೂ ವಿವಿಧ ವಾದ್ಯ ಮೇಳ ಸಮೇತ ಪಟ್ಟಣದ ಸಂಜೀವನಗರ ಆಂಜನೇಯ ದೇವಸ್ಥಾನದ ಶ್ರೀರಾಮ ವೃತ್ತದಿಂದ ಅಂಬಿಗೇರ ಚೌಡಯ್ಯ ವೃತ್ತ ಮೂಲಕ ಬಜಾರ ಹನುಮಾನ ಮಂದಿರದ ವರೆಗೆ ಮೆರವಣಿ ಮಾಡಲಾಯಿತು. ಮೆರವಣಿಗೆ ಯುದ್ದಕ್ಕೂ ರಾಮನಾಮಸ್ಮರಣೆ, ಘೋಷಣೆ ಮೊಳಗಿಸುವುದರ ಮೂಲಕ ರಾಮ ಮಂದಿರ ಉದ್ಘಾಟನೆ ಹಾಗೂ ಪ್ರಾಣ ಪ್ರತಿಷ್ಠಾಪನೆ ಸಂದೇಶ ಸಾರಲಾಯಿತು. ಮೆರವಣಿಗೆಯಲ್ಲಿ ನೂರಾರು ಹಿಂದೂಪರ ಸಂಘಟನೆಯ ಕಾರ್ಯಕರ್ತರು ರಾಮ ಭಕ್ತರು ಭಾಗವಹಿಸಿದ್ದರು. ಪೊಲೀಸ್ ಇಲಾಖೆ ಸೂಕ್ತ ಬಂದೋಬಸ್ತ ಕಲ್ಪಿಸಿತ್ತು.

# ಯಲ್ಲಮ್ಮ ದೇವಿ ಜಾತ್ರೆ ಪ್ರಯುಕ್ತ ವಿಶೇಷ ಹೆಚ್ಚುವರಿ ಬಸ್ ಸೌಲಭ್ಯ

ಚಿಕ್ಕೋಡಿ: ಸವದತ್ತಿಯ ಶ್ರೀ ಯಲ್ಲಮ್ಮ ದೇವಿ ಜಾತ್ರೆಯ ಪ್ರಯುಕ್ತ ವಾ.ಕ.ರ.ಸಾ.ಸಂಸ್ಥೆ ಚಿಕ್ಕೋಡಿ ವಿಭಾಗ ಜ.22 ರಿಂದ 29 ವರಗೆ ಗೋಕಾಕ, ಘಟಪ್ರಭಾ, ಅಥಣಿ, ಕಾಗವಾಡ, ನಿಪ್ಪಾಣಿ, ರಾಯಬಾಗ ಸೇರಿದಂತೆ ಹಲವು ಕಡೆಯಿಂದ ಯಲ್ಲಮ್ಮನಗುಡ್ಡ ಹಾಗೂ ಜೋಗುಳಬಾವಿ ವರೆಗೆ ಹೆಚ್ಚುವರಿ ಬಸ್ಸಗಳ ಸೌಲಭ್ಯ ಕಲ್ಪಿಸಲಾಗುವುದು.

ಚಿಕ್ಕೋಡಿ ವಿಭಾಗದ ಗೋಕಾಕ, ರಾಯಬಾಗ, ಅಥಣಿ, ನಿಪ್ಪಾಣಿ, ಘಟಕಗಳಿಂದ ಹೆಚ್ಚುವರಿ ಬಸಗಳ ವ್ಯವಸ್ಥೆ ಕಲ್ಪಿಸಲಾಗಿದು, ಜಾತ್ರೆ ಸುವ್ಯವಸ್ಥಿತವಾಗಿ ನೆರವೇರಿಸಲು ಗೋಕಾಕ ಬಸ್ ನಿಲ್ದಾಣದಲ್ಲಿ ಮತ್ತು ಸವದತ್ತಿ ಜಾತ್ರಾ ಕೇಂದ್ರದಲ್ಲಿ ಪ್ರತ್ಯೇಕ ಜಾತ್ರಾ ನಿಯಂತ್ರಣ ಬಿಂದುಗಳಲ್ಲಿ ನುರಿತ ಸಾರಿಗೆ ನಿಯಂತ್ರಕ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಎಂದು ವಿಭಾಗದ ನಿಯಂತ್ರಣಾಧಿಕಾರಿ ಎಂ. ಆರ್. ಮುಂಜಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳಗಾವಿ ಕೇಂದ್ರ ಬಸ್ ನಿಲ್ದಾಣದಿಂದ ಸವದತ್ತಿ ಜಾತ್ರೆಗೆ ವಿಶೇಷ ಬಸ್ ಸೌಲಭ್ಯ

ಬೆಳಗಾವಿ: ಶ್ರೀ ಯಲ್ಲಮ್ಮಾದೇವಿ 2024 ರ ಜಾತ್ರೆಯ ಪ್ರಯುಕ್ತ ಜ 21, 23, 25, 26, 28, ಹಾಗೂ 31 ರ ವರೆಗೆ ವಿಶೇಷ ವಾಹನಗಳ ಸೌಲಭ್ಯ ಕಲ್ಪಿಸಲಾಗುವುದು.

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಸದರಿ ಜಾತ್ರೆಗೆ ಬೆಳಗಾವಿ ಕೇಂದ್ರ ಬಸ್ ನಿಲ್ದಾಣ ಹಾಗೂ ನಗರ ಬಸ್ ನಿಲ್ದಾಣದಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ವಿಶೇಷ ಸಾರಿಗೆ ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

ಈ ಜಾತ್ರೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಭಕ್ತಾಧಿಗಳು ವಸ್ತಿ ಪ್ರಯಾಣಿಸುವುದರಿಂದ ವಾಹನಗಳನ್ನು ಮುಂಗಡ ಕಾಯ್ದಿರಿಸುವ ವ್ಯವಸ್ಥೆಯನ್ನು ಮಾಡಲಾಗಿದ್ದು, ಜ. 16 ರಿಂದ ಬೆಳಗಾವಿ ಕೇಂದ್ರ ಬಸ್ ನಿಲ್ದಾಣದಲ್ಲಿ ಮುಂಗಡ ವಾಹನ ಬುಕ್ಕಿಂಗ್ ಕೌಂಟರ್‌ನ್ನು ತೆರೆಯಲಾಗಿದೆ. ಬೆಳಗಾವಿ–1 ನೇ ಘಟಕದಲ್ಲಿ ಕೂಡ ಮುಂಗಡ ವಾಹನಗಳನ್ನು ಕಾಯ್ದಿರಿಸಬಹುದಾಗಿದೆ.

**ಮುಂಗಡ ಬುಕ್ಕಿಂಗ್ ಕೌಂಟರ್:**

ಮುಂಗಡ ಬುಕ್ಕಿಂಗ್ ಕೌಂಟರ್ ಮೋ.ಸಂಖ್ಯೆ 9964137450. ಬೆಳಗಾವಿ, ಕೇ.ಬ.ನಿ ನಿಲ್ದಾಣ ಮೇಲ್ವಿಚಾರಕರ ಸಂಖ್ಯೆ 7760991613, ಬೆಳಗಾವಿ–1 ಘಟಕ ವ್ಯವಸ್ಥಾಪಕರು ಸಂಖ್ಯೆ 7760991625, ಬೆಳಗಾವಿ –2 ಘಟಕ ವ್ಯವಸ್ಥಾಪಕರ, 7760991626, ಘಟಕ 3 ವ್ಯವಸ್ಥಾಪಕರು, 7760991627, ಬೆಳಗಾವಿ–4 ಘಟಕ ವ್ಯವಸ್ಥಾಪಕರು 7618765904, ವಿಭಾಗೀಯ ಸಂಚಾರ ಅಧಿಕಾರಿ, 7760991602, ಕಚೇರಿ ವಿಭಾಗೀಯ ಅಧಿಕರಿ 7760991634, ಸಂಖ್ಯೆಗೆ ಸಂರ್ಪಕಿಸಬಹುದ್ದಾಗಿ.

ಹೆಚ್ಚಿನ ಮಾಹಿತಿಗಾಗಿ ವಿಭಾಗದ ವ್ಯಾಪ್ತಿಯ ಯಾವುದಾದರೂ ಗ್ರಾಮಗಳಿಂದ ಗುಂಪುಗುಂಪಾಗಿ ಪ್ರಯಾಣಿಸುತ್ತಿದ್ದಲ್ಲಿ, ಸದರಿ ಗ್ರಾಮಕ್ಕೆ ಹೋಗಿ ಬುಕ್ಕಿಂಗ್ ಮಾಡಿಕೊಳ್ಳಬಹುದು ಎಂದು ಬೆಳಗಾವಿ ವಾಕರಸಾ ಸಂಸ್ಥೆ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳಗಾವಿ ಲಾತೂರ್ ಅಂತರಾಜ್ಯ ಮಾರ್ಗದಲ್ಲಿ ಪಲ್ಲಕ್ಕಿ ನಾನ್ ಎ/ಸಿ ಸ್ಲೀಪರ್ ಸಾರಿಗೆ ವ್ಯವಸ್ಥೆ ಜ.19 ರಂದು

ಬೆಳಗಾವಿ: ಬೆಳಗಾವಿಯಿಂದ ಲಾತೂರ ಅಂತರ ರಾಜ್ಯ ಮಾರ್ಗದಲ್ಲಿ ಪಲ್ಲಕ್ಕಿ ನಾನ್ ಎ/ಸಿ ಸ್ಲೀಪರ್_ ಸಾರಿಗೆ ಪ್ರಾರಂಭಿಸಲಾಗುವುದು.

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬೆಳಗಾವಿ ವಿಭಾಗದ ವತಿಯಿಂದ ಸಾರ್ವಜನಿಕ ಪ್ರಯಾಣಿಕರಿಗೆ ಉತ್ತಮ ದರ್ಜೆಯ ಪ್ರಯಾಣ ಸೌಲಭ್ಯ ಒದಗಿಸುವ ದೃಷ್ಟಿ ಜ 19 ರಿಂದ ಬೆಳಗಾವಿಯಿಂದ–ಲಾತೂರ ಮಾರ್ಗದಲ್ಲಿ ಹೊಸ ವಿನ್ಯಾಸದೊಂದಿಗೆ ಅತ್ಯಾಧುನಿಕ ಸೌಲಭ್ಯಗಳುಳ್ಳ ನೂತನ ಪಲ್ಲಕ್ಕಿ ನಾನ್ ಎ/ಸಿ ಸ್ಲೀಪರ್ ಸಾರಿಗೆಯನ್ನು ಪ್ರಾರಂಭಿಸಲಾಗಿದೆ.


ಇ–ಟಿಕೇಟನ್ನು ಆನ್ ಲೈನ್, **www.ksrtc.in, www.nwkrtc.in** ಹಾಗೂ ಮೊಬೈಲ್ ಮುಖಾಂತರ ಪಡೆಯಬಹುದಾಗಿದೆ.

ಬೆಳಗಾವಿ ಬಸ್ ನಿಲ್ದಾಣದ ರಿಜರ್ವೇಷನ್ ಕೌಂಟರ್ ನಲ್ಲಿಯೂ ಸಹ ಮುಂಗಡ ಟಿಕೇಟ ಕಾಯ್ದಿರಿಸಿಕೊಳ್ಳಬಹುದಾಗಿದೆ.

ಸದರಿ ಸಾರಿಗೆಗೆ ಬೆಳಗಾವಿಯಿಂದ–ಲಾತೂರಗೆ ಪ್ರಯಾಣ ದರ 900 ರೂ ಇರುತ್ತದೆ.

ಮಾರ್ಗ ,ಬೆಳಗಾವಿ ಲಾತೂರ ವ್ಹಾಯಾ ಜಮಖಂಡಿ–ವಿಜಯಪೂರ–ಸೊಲ್ಲಾಪೂರ–ತುಳಜಾಪೂರ ನಿರ್ಗಮನ 20.00 ಆಗಮನ 6.20, ಲಾತೂರ –ಬೆಳಗಾವಿ ವ್ಹಾಯಾ ತುಳಜಾಪೂರ–ಸೊಲ್ಲಾಪೂರ–ವಿಜಯಪೂರ–ಜಮಖಂಡಿ, ನಿರ್ಗಮನ 7.30 ಆಗಮನ 5.30 ಆಗಲ್ಲಿದೆ ಎಂದು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬೆಳಗಾವಿ ಹಿರಿಯ ವಿಭಾಗಿಯ ನಿಯಂತ್ರಣಾದಿಕಾರಿಗಳು ತಿಳಿಸಿದ್ದಾರೆ.

# ಕು. ಅಂತರಾ ಕುಲಕರ್ಣಿಗೆ ಸನ್ಮಾನ ಮತ್ತು ಸಂಗೀತ ಸಂಜೆ



ಬೆಳಗಾವಿ: ಬೆಳಗಾವಿಯ ಫ್ಯಾನ್ ಕ್ಲಬ್ ಆಫ್ ಓಲ್ಡ ಸಾಂಗ್ಸದವರು ಇದೇ ದಿ. 21 ರವಿವಾರದಂದು ಸಾ. 5–30 ಕ್ಕೆ ಹಿಂದವಾಡಿಯಲ್ಲಿರುವ ಐ.ಎಂ.ಇ.ಆರ್. ಸಭಾಭವನದಲ್ಲಿ ಸೂರ ನವಾ ಧ್ಯಾಸ ನವಾ ಮರಾಠಿ ರಿಯಾಲಿಟಿ ಸಂಗೀತ ಶೋ ದಲ್ಲಿ ಎರಡನೇ ಸ್ಥಾನ ಪಡೆದಿರುವ ಯುವ ಕಲಾವಿದೆ ಕು. ಅಂತರಾ ಕುಲಕರ್ಣಿ ಇವರಿಗೆ ಗೌರವ ಸನ್ಮಾನವನ್ನು ಹಮ್ಮಿಕೊಂಡಿದ್ದಾರೆ. ಹಿರಿಯ ನ್ಯಾಯವಾದಿ ಎಸ್ ಎಂ. ಕುಲಕರ್ಣಿಯವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಕು. ಅಂತರಾ ಕುಲಕರ್ಣಿ ಅಲ್ಲದೇ ಯುವ ಕಲಾವಿದರಾದ ಪೂರ್ವಿ, ಶ್ರೇಯಾ, ಸೃಷ್ಠಿ, ಪಾವನಿ ಇವರಿಂದ ಚಿತ್ರಗೀತೆಗಳ ಸಂಗೀತ ಸಂಜೆ ನಡೆಯಿಸಿಕೊಡಲಿದ್ದಾರೆ. ಪ್ರವೇಶ ಉಚಿತವಾಗಿದ್ದು ಸಂಗೀತಾಸಕ್ತರು ಇದರ ಉಪಯೋಗ ಪಡೆದುಕೊಳ್ಳುವಂತೆ ಸಂಸ್ಥೆ ಅಧ್ಯಕ್ಷರಾದ ಡಾ. ಅರವಿಂದ ಕುಲಕರ್ಣಿ ತಿಳಿಸಿದ್ದಾರೆ.

ಅಂತರಾ ಕುಲಕರ್ಣಿ ಪರಿಚಯ: ಗೋಗಟೆ ಪಿ.ಯು.ಕಾಲೇಜ ಆಫ್ ಕಾಮರ್ಸ ಕಾಲೇಜದಲ್ಲಿ ಪಿಯುಸಿ ಮೊದಲ ವರ್ಷದಲ್ಲಿ ಓದುತ್ತಿರುವ ಅಂತರಾ ಕುಲಕರ್ಣಿ ಕಲರ್ಸ ಮರಾಠಿ ಟಿ.ವಿ. ಚೆನಲ್ ದಲ್ಲಿ ಬರುವ ಸೂರ ನವಾ ಧ್ಯಾಸ ನವಾ ಎಂಬ ಮರಾಠಿ ರಿಯಾಲಟಿ ಸಂಗೀತ ಷೋದಲಿ ಎರಡನೆಯ ಸ್ಥಾನ ಪಡೆದಿದ್ದಾಳೆ.

ರಫೀಕ ಶೇಖ ಇವರಿಂದ ಧ್ವನಿ ತರಬೇತಿ ಪಡೆದಿರುವ ಕು. ಅಂತರಾ ಕುಲಕರ್ಣಿ ಸಧ್ಯ ಕೊಲ್ಲಾಪುರದ ಶ್ರೀಮತಿ ಸ್ನೇಹಾ ರಾಜೂರಕರ ಇವರಿಂದ ಸಂಗೀತ ತರಬೇತಿ ಪಡೆಯುತ್ತಿದ್ದಾಳೆ.

ಕಲರ್ಸ ಕನ್ನಡ ಮತ್ತು ಝೀ ಟಿವಿ ಹಿಂದಿ ರಿಯಾಲಟೀ ಷೋಗಳಲ್ಲಿ ಸಹ ಭಾಗವಹಿಸಿದ್ದಾಳೆ. ಈ ಷೋದಲ್ಲಿ ಮಾಧುರಿ ದಕ್ಷೀತ ,ಸುರೇಶ ವಾಡಕರ, ಸಾದನಾ ಸರಗಮ, ನಾನಾ ಪಾಟೇಕರ, ಭರತ ಜಾಧವ,ಅಶೋಕ ಸರಾಫ, ನಿವೇದಿತಾ ಸರಾಫ, ಸೋನಾಲಿ ಕುಲಕರ್ಣಿ, ವೈಶಾಲಿ ಸಾಮಂತ ಮುಂತಾದವರೆದುರಲ್ಲಿ ಕಾರ್ಯಕ್ರಮ ನೀಡಿದ ಶ್ರೇಯಸ್ಸು ಇವಳದ್ದು.

# ಕೆರೆಗಳು ಗ್ರಾಮೀಣ ಜನರ ಜೀವನಾಡಿ: ಬಸವರಾಜ ಸೊಪ್ಪಿಮಠ



ಬೆಳಗಾವಿ: ಮನುಷ್ಯನ ಜೀವಸೆಲೆಯೇ ಕೆರೆಗಳು. ಕೆರೆಗಳು ಗ್ರಾಮದ ಅಭಿವೃದ್ಧಿಯ ಸಂಕೇತ.ಕೆರೆಗಳು ತುಂಬಿ ಸಂಪದ್ಭರಿತವಾಗಿದ್ದರೆ ಆ ಊರಿನ ಕೃಷಿ,ಜನ ಜಾನುವಾರು,ಪ್ರಾಣಿ ಪಕ್ಷಿಗಳಿಗೆ ನೀರಿನ ಅಭಾವವಾಗುವುದಿಲ್ಲ. ಕೆರೆಗಳು ಜನಜೀವನದ ಜೀವನಾಡಿ ಎಂದು ಬೆಳಗಾವಿ ಜಿಲ್ಲಾ ಜನಜಾಗೃತಿ ವೇದಿಕೆಯ ಜಿಲ್ಲಾಧ್ಯಕ್ಷರಾದ ಬಸವರಾಜ ಸೊಪ್ಪಿಮಠ ಅವರು ಹೇಳಿದರು.

ಮಜಗಾವಿಯ ವಿಠ್ಠಲ ರುಕ್ಮಿಣಿ ಸಭಾ ಭವನದಲ್ಲಿ ಆಯೋಜಿಸಲಾದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬೆಳಗಾವಿ ಜಿಲ್ಲಾ ವ್ಯಾಪ್ತಿಯ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದಡಿ ಹೂಳೆತ್ತಲಾದ ಕೆರೆ ಸಮಿತಿ ಪದಾಧಿಕಾರಿಗಳ ಪ್ರೇರಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನೀರಿನ ಮೂಲಗಳು ಬರಿದಾಗುತ್ತಿವೆ.ಕೆರೆಗಳು ಆಟದ ಮೈದಾನ, ಕಸ ತ್ಯಾಜ್ಯ ವಿಲೇವಾರಿ ಘಟಕಗಳಾಗುತ್ತಿವೆ. ಕೆರೆಗಳನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದರು.

ನಮ್ಮೂರು ನಮ್ಮ ಕೆರೆ ವಿಭಾಗದ ನಿರ್ದೇಶಕರಾದ ಶಿವಾನಂದ ಆಚಾರ್ಯ ಮಾತನಾಡಿ, ಕರ್ನಾಟಕ ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಬರಗಾಲಕ್ಕೆ ತುತ್ತಾಗುತ್ತಿದೆ. ಬರಗಾಲ ಬಂದಾಗ ಗಂಜಿ ಕೇಂದ್ರ, ಜಾನುವಾರುಗಳಿಗೆ ಮೇವು,ಕುಡಿಯುವ ನೀರಿಗೆ ಟ್ಯಾಂಕರ ಒದಗಿಸುವ ಬದಲು ಊರಿನ ಕೆರೆಗಳನ್ನು ಹೂಳೆತ್ತಿ ಪುನಶ್ಚೇತನ ಮಾಡಿಟ್ಟುಕೊಳ್ಳುವುದು ಶಾಶ್ವತ ಪರಿಹಾರ.ಅಂತಹ ಹೂಳೆತ್ತಲಾದ ಕೆರೆಗಳ ಸಂರಕ್ಷಣೆಯನ್ನು ಕೆರೆ ಅಭಿವೃದ್ಧಿ ಸಮಿತಿಯವರು ನಿರಂತರವಾಗಿ ಮಾಡಬೇಕಿದೆ ಎಂದು ಹೇಳಿದರು.

ಕೆರೆಯ ಸುತ್ತ ಗಿಡಗಂಟಿ ಬೆಳೆಯದಂತೆ, ಮಲ ಮೂತ್ರ ವಿಸರ್ಜನೆ ಮಾಡದಂತೆ ಮತ್ತು ಸತ್ತ ಪ್ರಾಣಿಗಳ ಕಳೆಬರಹವನ್ನು ಕೆರೆಯಲ್ಲಿ ಎಸೆಯದಂತೆ ಸ್ವಚ್ಛತೆ ಕಾಪಾಡಿಕೊಳ್ಳುವುದು.

ದೇವಸ್ಥಾನ, ವಿದ್ಯಾಲಯ ಮತ್ತು ಕೆರೆಗಳು ಒಂದು ಊರಿನ ಆಸ್ತಿಗಳು ಎಂದರು.

ಬೆಳಗಾವಿ 01 ಜಿಲ್ಲಾ ವ್ಯಾಪ್ತಿಗೆ ಸಂಬಂಧಿಸಿದಂತೆ 20 ಕೆರೆಗಳನ್ನು ಹೂಳೆತ್ತಲಾಗಿದ್ದು ಅದರಲ್ಲಿ ಮಣ್ಣೂರಿನ ಕೆರೆ ಅಭಿವೃದ್ಧಿ ಸಮಿತಿ ಅತ್ಯುತ್ತಮ ಕೆರೆ ಅಭಿವೃದ್ಧಿ ಸಮಿತಿ ಎಂದು ಗುರುತಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಬೆಳಗಾವಿ ಜಿಲ್ಲಾ ನಿರ್ದೇಶಕರಾದ ಸತೀಶ ನಾಯ್ಕ, ಜಿಲ್ಲಾ ಜನ ಜಾಗೃತಿ ವೇದಿಕೆಯ ಸದಸ್ಯರಾದ ಜಿ.ಆರ್ ಸೋನೆರ್, ಧಾರವಾಡ ಪ್ರಾದೇಶಿಕ ವ್ಯಾಪ್ತಿಯ ಅಭಿಯಂತರರಾದ ನಿಂಗರಾಜ ಮಾಳವಾಡ, ಯೋಜನಾಧಿಕಾರಿ ನಾಗರಾಜ ಹದ್ಲಿ ಸ್ವಾಗತಿಸಿದರು. ಕೃಷಿಮೇಲ್ವಿಚಾರಕ ಮಂಜುನಾಥ ಗೌಡ ನಿರೂಪಿಸಿದರು.ಗುಡ್ಡನಗೌಡ ವಂದಿಸಿದರು ,ಮೇಲ್ವಿಚಾರಕಿ ಪ್ರಭಾವತಿ,ಸತೀಶ,ಕೆರೆ ಸಮಿತಿ ಪದಾಧಿಕಾರಿಗಳು ಭಾಗವಹಿಸಿದ್ದರು.

## ಹೊಸ ನ್ಯಾಯಬೆಲೆ ಅಂಗಡಿ ತೆರೆಲು ಅರ್ಜಿ ಆಹ್ವಾನ

ಮಂಗಳೂರು: ಉಳ್ಳಾಲ ತಾಲೂಕಿನ ಬೆಳರಿಂಗೆ ಹಾಗೂ ಕುಂಪಲದಲ್ಲಿ ಹೊಸ ನ್ಯಾಯಬೆಲೆ ಅಂಗಡಿ ತೆರೆಯುವ ಬಗ್ಗೆ ಸಾರ್ವಜನಿಕ ವಿತರಣಾ ಪದ್ಧತಿ ನಿಯಂತ್ರಣ ಆದೇಶದನ್ವಯ ಆದ್ಯತೆ ಮೇರೆಗೆ ಅರ್ಹ ಸಹಕಾರಿ ಸಂಘಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಸಹಕಾರಿ ಸಂಘಗಳು ನಿಗಧಿತ ಅರ್ಜಿ ಯಲ್ಲಿ ನಿಗದಿ ಪಡಿಸಿದ ದಾಖಲೆಗಳೊಂದಿಗೆ ಉಪ ನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ ಅಥವಾ ತಹಶೀಲ್ದಾರರ ಕಚೇರಿ, ಉಳ್ಳಲಾಲ ತಾಲೂಕು ಇಲ್ಲಿಗೆ ಫೆಬ್ರವರಿ 17ರೊಳಗೆ ಅರ್ಜಿ ಸಲ್ಲಿಸುವಂತೆ ಆಹಾರ, ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಡಿಂಬಾ ವಿವಾಹ ವಾಚನ ಮತ್ತು ವ್ಯಾಖ್ಯಾನ




ಬೆಳಗಾವಿ: ಮಂಜುಳಾ ಕೊಲ್ಹಾರ ಅವರ ಮನೆಯಲ್ಲಿ ಕುಮಾರವ್ಯಾಸ ಜಯಂತಿಯ ಪ್ರಯುಕ್ತ ಕುಮಾರವ್ಯಾಸ ಭಾರತದ ಹಿಡಿಂಬಾ ವಿವಾಹ ಭಾಗದ ವಾಚನ ಮತ್ತು ವ್ಯಾಖ್ಯಾನವನ್ನು ಶ್ರೀಮತಿ ರಾಜೇಶ್ವರಿ ಜಮ್ಮಿಹಾಳ ಹಾಗೂ ಶ್ರೀಮತಿ ರಾಧಾ ಕೌಲಗುಡ್ಡ ಅವರು ನಡೆಸಿಕೊಟ್ಟರು.

## ಕಬಡ್ಡಿ ಪಂದ್ಯಾವಳಿ

ಹುಕ್ಕೇರಿ: ರಾಷ್ಟ್ರೀಯ ಯುವದಿನಾಚರಣೆ ಅಂಗವಾಗಿ ಜಯಭಾರತ ಫೌಂಡೇಶನ, ಹಾಗೂ ಮಹಿಳಾ ಕಲ್ಯಾಣ ಸಂಸ್ಥೆ ಬೆಳಗಾವಿ ಜಂಟಿಯಾಗಿ ಗ್ರಾಮೀಣ ಯುವಕರಿಗಾಗಿ ಕಬಡ್ಡಿ ಪಂದ್ಯಾವಳಗಳನ್ನು ಆಯೋಜಿಸಿದೆ. ಪ್ರಥಮ ಬಹುಮಾನ ರೂ. 10,000/–, ದ್ವಿತೀಯ ಬಹುಮಾನ 7,500/–, ತೃತೀಯ ಬಹುಮಾನ 5,000/–, ಸಮಾಧಾನಕರ ಬಹುಮಾನ 2,500/– ಹಾಗೂ ಪಾರಿತೋಷಕ ನೀಡಲಿದೆ. ಪಂದ್ಯಾವಳಿಗಳು ರವಿವಾರ ದಿನಾಂಕ 21 ರಂದು ಮುಂಜಾನೆ 9–00 ಗಂಟೆಗೆ ಜರುಗಲಿವೆ. ಭಾಗವಹಿಸಲು ಆಸಕ್ತಿ ಹೊಂದಿರುವ ತಂಡಗಳು 9590551177 ಗೆ ಸಂಪರ್ಕಿಸಲು ಕೋರಲಾಗಿದೆ.

# ಆರ್.ಪಿ.ಡಿ ಮಹಾವಿದ್ಯಾಲಯದಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಾಗಾರ




ಬೆಳಗಾವಿ: ನಗರದ ಪ್ರತಿಷ್ಠಿತ ಎಸ್. ಕೆ. ಇ. ಸಂಸ್ಥೆಯ ಆರ್. ಪಿ. ಡಿ. ಮಹಾವಿದ್ಯಾಲಯದ ಹವ್ಯಾಸಿ ಸಂಘ ಹಾಗೂ ಕೇಂದ್ರ ಸರ್ಕಾರದ ಅನುದಾನದ ಅಡಿಯಲ್ಲಿ ನಡೆಯುತ್ತಿರುವ ಜ್ಞಾನ ಜ್ಯೋತಿ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಬೆಳಗಾವಿ ಇವರ ಸಹಯೋಗದಲ್ಲಿ ದಿನಾಂಕ 15–12–2023 ರಂದು ಆರ್. ಪಿ. ಡಿ. ಮಹಾವಿದ್ಯಾಲಯದಲ್ಲಿ "ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮ ಹಾಗೂ ಸರ್ಕಾರಿ ಯೋಜನೆಗಳು" ಎಂಬ ವಿಷಯದ ಮೇಲೆ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಆರ್. ಪಿ. ಡಿ ಮಹಾವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯರಾದ ಶ್ರೀಮತಿ ಬಿಂಬಾ ನಾಡಕರ್ಣಿ ಅವರು– "ವಿದ್ಯಾರ್ಥಿಗಳು ತಮ್ಮಲ್ಲಿ ಒಳ್ಳೆಯ ಹವ್ಯಾಸಗಳನ್ನು ಬೆಳೆಸಿಕೊಂಡು ಅವುಗಳನ್ನು ಇಂತಹ ಕಾರ್ಯಾಗಾರಗಳ ಮುಖಾಂತರ ಅಭಿವೃದ್ಧಿಗೊಳಿಸಿಕೊಳ್ಳಬೇಕು" ಎಂದು ಸಲಹೆ ನೀಡಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಡಾ. ಕವಿತಾ, ಜ್ಞಾನ ಜ್ಯೋತಿ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಪಲ್ಲವಿ ಚೌಗುಲೆ, ಕಾರ್ಯದರ್ಶಿಗಳಾದ ಶ್ರೀಮತಿ ವಿಜಯಾ ನೇಸರಗಿ ಆಗಮಿಸಿದ್ದರು. ಕಾರ್ಯದರ್ಶಿಗಳಾದ ಶ್ರೀಮತಿ ವಿಜಯಾ ನೇಸರಗಿ ಅವರು ಕೌಶಲ್ಯ ಅಭಿವೃದ್ಧಿಗಾಗಿ ಇರುವ ಸರ್ಕಾರಿ ಸೌಲಭ್ಯಗಳು ಮತ್ತು ಅವುಗಳ ಉಪಯೋಗದ ಕುರಿತು ಮಾತನಾಡಿದರು.

ಅದೇ ರೀತಿಯಾಗಿ ದಿನಾಂಕ 17–01–2024 ರಂದು ಕೋರ್ಸಗಳ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಂಡು 45 ದಿನಗಳ ಹೊಲಿಗೆ, ಪಾರ್ಲರ್, ಬೇಕರಿ ತರಬೇತಿಯನ್ನು ಪ್ರಾರಂಭಿಸಲಾಯಿತು. ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯರಾದ ಶ್ರೀ ಜ್ಞಾನೇಶ ಕಲಘಟಗಿ ಅವರು ಕೋರ್ಸನ್ನು ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಇಂತಹ ಕೋರ್ಸಗಳ ಮೂಲಕ ಕೌಶಲ್ಯ ತರಬೇತಿ ಅಗತ್ಯವಾಗಿದೆ, ವಿದ್ಯಾರ್ಥಿಗಳು ಇವುಗಳ ಮೂಲಕ ಕೌಶಲ್ಯವಂತರಾಗಿ ಸ್ವಾವಲಂಭಿಗಳಾಗಿ ಬೆಳೆಯಬೇಕು ಎಂದು ನುಡಿಯುವ ಮೂಲಕ ತರಬೇತಿ ಕಾರ್ಯಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಅಭಯ ಪಾಟೀಲ ಅವರು ಹಾಗೂ ಹೊಲಿಗೆ, ಪಾರ್ಲರ್, ಬೇಕರಿ ತರಬೇತಿ ನೀಡುವ ಸಂಪನ್ಮೂಲ ವ್ಯಕ್ತಿಗಳು, ಹವ್ಯಾಸಿ ಸಂಘದ ಮುಖ್ಯಸ್ಥರಾದ ಪ್ರೊ. ಇಂದಿರಾ ಹೋಳಕರ ಹಾಗೂ ಕೋರ್ಸ ಮುಖ್ಯಸ್ಥರಾದ ಪ್ರೊ. ಭಾರತಿ ಅಧ್ಯಾಪಕ ಹಾಗೂ ಮಹಾವಿದ್ಯಾಲಯದ ಇನ್ನಿತರ ಅಧ್ಯಾಪಕರು ಉಪಸ್ಥಿತರಿದ್ದರು. ಕೋರ್ಸಗಳಿಗೆ ಹೆಸರನ್ನು ನೋಂದಾಯಿಸಿದ ಸುಮಾರು 160 ಜನ ವಿದ್ಯಾರ್ಥಿಗಳು ಭಾಗಿಯಾಗಿದ್ದರು.

VOL. 04 ISSUE. 295 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089